# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 13 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 14–07–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00

Volume - 01 Issue - 13 | Title- Code: KARKAN 28269 | Chitradurga | Date: 14-07-2023 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಜಿ.ಪಂ.ಸಿಇಓ ಎಂ.ಎಸ್.ದಿವಾಕರ್ ಅವರಿಂದ ಈ ಸ್ವತ್ತು ವಿತರಣೆ **2**

ಫಸಲ್ ಬೀಮಾ ಯೋಜನೆ ವಿಮೆ ಹಣ ಬಿಡುಗಡೆಯಲ್ಲಿ ತಾರತಮ್ಯ ಕೃಷಿ ಅಧಿಕಾರಿಗಳೇ ಶಾಮೀಲು ಆರೋಪ!? **3**

ಕೇಂದ್ರ ಸರ್ಕಾರ ರಾಹುಲ್‌ಗೆ ಕಿರುಕುಳ ನೀಡುತ್ತಿರುವುದನ್ನು ವಿರೋಧಿಸಿ ಪ್ರತಿಭಟನೆ **4**


## ಫಾಸ್ಟ್ ನ್ಯೂಸ್

### ಮುದ್ರಾಂಕ ಶುಲ್ಕ ಹೆಚ್ಚಳ ಶುಲ್ಕ ಪ್ರಸ್ತಾವನೆ ಕೈ ಬಿಟ್ಟ ರಾಜ್ಯ ಸರ್ಕಾರ

» **ಬೆಂಗಳೂರು**

ಕರ್ನಾಟಕ ಮುದ್ರಾಂಕ ಕಾಯ್ದೆ 1957ರಲ್ಲಿನ ಷಡ್ಯೂ□□ನಲ್ಲಿರುವ ಅನುಚ್ಛೇದಗಳಂತೆ ಮುದ್ರಾಂಕ ಶುಲ್ಕವನ್ನು ಆಕರಿಸಲಾಗುತ್ತಿದ್ದು, ಪ್ರಸ್ತುತ ಕ್ರಯಪತ್ರಗಳಿಗೆ ಅನುಚ್ಛೇದ 20 (I) ರನ್ವಯ ಶೇಕಡ 5% ರಷ್ಟು ಮುದ್ರಾಂಕ ಶುಲ್ಕವನ್ನು ಆಕರಿಸಲಾಗುತ್ತಿದೆ. ಸದರಿ ಮುದ್ರಾಂಕ ಶುಲ್ಕವನ್ನು ಹೆಚ್ಚಿಸುವ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು. ಇಂದು ವಿಧಾನಪರಿಷತ್ತಿನ ಕಲಾಪದ ವೇಳೆ ವಿಧಾನಪರಿಷತ್ತಿನ ಸದಸ್ಯರಾದ ಮುನಿರಾಜುಗೌಡ ಪಿ.ಎಂ. ಅವರ ಪ್ರಶ್ನೆಗೆ ಉತ್ತರಿಸದ ಸಚಿವರು ಜಮೀನುಗಳ ಮೌಲ್ಯ ಪರಿಷ್ಕರಣೆ ಮಾಡಿ ಸುಮಾರು ನಾಲ್ಕೂವರೆ ವರ್ಷ ಮೇಲ್ಪಟ್ಟಿದ್ದು, ಜಮೀನಿನ ಮೌಲ್ಯ ಪರಿಷ್ಕರಣೆಗೆ ಕ್ರಮ ವಹಿಸಲಾಗುವುದು ಆದರೆ ಮುದ್ರಾಂಕ ಶುಲ್ಕ ಪರಿಷ್ಕರಣೆ ಇಲ್ಲ ಎಂದು ತಿಳಿಸಿದರು. ಮಾರುಕಟ್ಟೆ ಬೆಲೆ ಹೆಚ್ಚಿಸಲು 35 ಲಕ್ಷ ರೂ ನಿಂದ 45 ಲಕ್ಷ ರೂ ವರೆಗಿನ ಆಪಾ□□□□ಮೆಂಟ್ ಅಥವಾ ಫ್ಲಾ□□ಗಳ ಮೊದಲನೇ ಕ್ರಯದ ಮುದ್ರಾಂಕ ಶುಲ್ಕವನ್ನು ಶೇಕಡ 5% ರಿಂದ 3% ರಷ್ಟು ಕಡಿತ ಮಾಡಲಾಗಿತ್ತು. ಸದರಿ ಶುಲ್ಕವನ್ನು ಹೆಚ್ಚಳ ಮಾಡುವ ಪ್ರಸ್ತಾವ ಸದ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ ಎಂದು ತಿಳಿಸಿದರು.

### ಚಿಕ್ಕಮಗಳೂರಿನಲ್ಲಿ 40 ಕೆಜಿ ಟಮೋಟೋ ಕಳ್ಳತನ

» **ಚಿಕ್ಕಮಗಳೂರು**

ತರಕಾರಿ ಅಂಗಡಿಯಲ್ಲಿದ್ದ 3000 ಸಾವಿರ ಮೌಲ್ಯದ 40 ಕೆ.ಜಿ. ಟೊಮ್ಯಾಟೊ ಇದ್ದ ಎರಡು ಟ್ರೇ ಕಳ್ಳತನವಾಗಿದ್ದು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುವ ಘಟನೆ ಜಿಲ್ಲೆಯ ಆಲ್ದೂರಿನಲ್ಲಿ ನಡೆದಿದೆ. ಆಲ್ದೂರು ಪಟ್ಟಣದ ನದೀಂ ಎಂಬುವರ ಅಂಗಡಿಯಲ್ಲಿ ಎರಡು ಟ್ರೇ ಟೊಮ್ಯಾಟೊ ಕಳ್ಳತನವಾಗಿದೆ. ಸೋಮವಾರ ರಾತ್ರಿ ಎಂದಿನಂತೆ ತರಕಾರಿಯನ್ನ ಅಂಗಡಿಯಲ್ಲಿ ಇಟ್ಟು ಟಾರ್ಪಲ್ ಎಳೆದು ಹೋಗಿದ್ದರು. ಆದರೆ, ಮಂಗಳವಾರ ಬೆಳಗ್ಗೆ ಅಂಗಡಿಗೆ ಬಂದಾಗ ಟೊಮ್ಯಾಟೊ ಇರಲಿಲ್ಲ. ಆಗ ಅಂಗಡಿಯ ಟಾರ್ಪಲ್ ಸರಿಸಿರುವುದು ಬೆಳಕಿಗೆ ಬಂದಿದೆ. ಆಲ್ದೂರು ಠಾಣೆಯ ಕಾಂಪೌಂ□□ಗೆ ಹೊಂದಿಕೊಂಡಂತಿರುವ ತರಕಾರಿ ಅಂಗಡಿಯಲ್ಲಿ ಟೊಮ್ಯಾಟೊ ಕಳ್ಳತನವಾಗಿದ್ದು ಸಾಲ ಮಾಡಿ ತರಕಾರಿ ವ್ಯಾಪಾರ ಮಾಡಿಕೊಂಡು ಬದುಕು ದೂಡುತ್ತಿದ್ದ ನದೀಂ ಅವರು ಅತಂತ್ರಕ್ಕೀಡಾಗಿದ್ದಾರೆ. ಆದರೆ, ನದೀಂ ಅವರ ತರಾಕಾರಿ ಅಂಗಡಿಗೆ ಬಾಗಿಲು ಇರಲಿಲ್ಲ. ಟಾರ್ಪಲ್ ಕಟ್ಟಿ ಹೋಗುತ್ತಿದ್ದರು. ಹೀಗೆ ಟಾರ್ಪಲ್ ಕಟ್ಟಿ ಹೋದಾಗ ಬರುವಷ್ಟರಲ್ಲಿ ರಾತ್ರೋರಾತ್ರಿ ಕಳ್ಳತನವಾಗಿದ್ದು ನದೀಂ ಟೊಮ್ಯಾಟೊ ಕಳ್ಳತನವಾಗಿರುವ ಬಗ್ಗೆ ಆಲ್ದೂರು ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

**ವಿಧಾನಸಭೆ ಕಲಾಪದಲ್ಲಿ ಪ್ರಸ್ತಾಪ**

# ಶೇಂಗಾ ಬಿತ್ತನೆ ಬೀಜದ ಬೆಲೆ ಪರಿಶೀಲಿಸಿ ಸಬ್ಸಿಡಿ ಹೆಚ್ಚಿಸಿ: ಶಾಸಕ ಟಿ.ರಘುಮೂರ್ತಿ

» **ಚಿತ್ರದುರ್ಗ**



> ನಮ್ಮ ಜಿಲ್ಲೆಯ ರೈತರಿಗೆ ಶೇಂಗಾ ಬಿತ್ತನೆ ಬೀಜದ ಬೆಲೆಯಲ್ಲಿ ಸಬ್ಸಿಡಿ ಹೆಚ್ಚಿಸಲು ಕೃಷಿ ಸಚಿವರಿಗೆ ಮನವಿ ಮಾಡಿದ್ದೇನೆ. ಸಚಿವರು ಸಹ ಪರಿಶೀಲಿಸುತ್ತೇನೆ ಎಂದಿದ್ದು ಬೆಲೆ ಕಡಿಮೆ ಮಾಡಿದರೆ ರೈತರಿಗೆ ಹೆಚ್ಚು ಅನುಕೂಲವಾಗುತ್ತದೆ.
> » **ಟಿ.ರಘುಮೂರ್ತಿ. ಶಾಸಕರು ಚಳ್ಳಕೆರೆ ವಿಧಾನ ಸಭಾ ಕ್ಷೇತ್ರ**

ಶೇಂಗಾ ಬಿತ್ತನೆ ಬೀಜವನ್ನು ಮಾರುಕಟ್ಟೆ ದರಕ್ಕಿಂತ ಹೆಚ್ಚಿನ ದರವನ್ನು ಕೃಷಿ ಇಲಾಖೆ ನಿಗದಿ ಮಾಡಿದ್ದು ರೈತರು ಮಾರುಕಟ್ಟೆಯಲ್ಲಿ ಹೆಚ್ಚು ಖರೀದಿ ಮಾಡುತ್ತಿದ್ದು ಶೇಂಗಾ ಬಿತ್ತನೆ ಬೀಜದಲ್ಲಿ ಸರ್ಕಾರದಿಂದ ಮರು ಪರಿಶೀಲನೆ ನಡೆಸಿ ಕೃಷಿ ಇಲಾಖೆಯಿಂದ ಸಬ್ಸಿಡಿ ನೀಡುವ ಮೂಲಕ ರೈತರ ನೆರವಿಗೆ ಸರ್ಕಾರ ದಾವಿಸಬೇಕು ಎಂದು ಶಾಸಕ ಟಿ.ರಘುಮೂರ್ತಿ ವಿಧಾನಸಭೆ ಕಲಾಪದ ವೇಳೆ ಕೃಷಿ ಸಚಿವರಾದ ಚಲುವರಾಯಸ್ವಾಮಿ ಮತ್ತು ಸರ್ಕಾರಕ್ಕೆ ಮನವಿ ಮಾಡಿದರು.

ಬಜೆಟ್ ಅಧಿವೇಶನ ಮೇಲೆ ನಡೆಯುತ್ತಿರುವ ಚರ್ಚೆ ವೇಳೆ ಗಮನ ಸೆಳೆಯವ ಪ್ರಶ್ನೋತ್ತರ ವೇಳೆ ಮಾತನಾಡಿದ ಶಾಸಕ ಟಿ.ರಘುಮೂರ್ತಿ ಅವರು ಚಿತ್ರದುರ್ಗ ಜಿಲ್ಲೆಯಲ್ಲಿ ಚಳ್ಳಕೆರೆ ವಿಧಾನ ಸಭಾ ಕ್ಷೇತ್ರ ಸೇರಿ ಮೊಳಕಾಲ್ಮುರು, ಹಿರಿಯೂರು, ಚಿತ್ರದುರ್ಗ, ಹಿರಿಯೂರು, ಹೊಸದುರ್ಗ ತಾಲೂಕುಗಳು ಅಲ್ಲದೇ ತುಮಕೂರು ಜಿಲ್ಲೆ ರೈತರಿಗೆ ಸಹ ಸಬ್ಸಿಡಿ ನೀಡಿದರೆ ಹೆಚ್ಚಿನ ಅನುಕೂಲವಾಗುತ್ತದೆ.

ರೈತರು ಕಷ್ಟದಲ್ಲಿದ್ದು ಶೇಂಗಾ ಬಿತ್ತನೆಗೆ ಸರ್ಕಾರ ಸಬ್ಸಿಡಿ ನೀಡಬೇಕು. ಕೃಷಿ ಸಚಿವರ ಮಾಹಿತಿಯಂತೆ ಮೂರು ವಿಧದ ಬಿತ್ತನೆ ಬೀಜಗಳಾದ ಟಿಎಂವಿ–2, ಕದಿರಿ ಲೇಪಾನಿಲ್ಲಬೇಕು. 6 ಆದರೆ ನಮ್ಮ ಭಾಗದಲ್ಲಿ ಟಿಎಂವಿ–2 ಶೇಂಗಾ ಬೀಜವನ್ನು ಹೆಚ್ಚಿದಾಗಿ ಉಪಯೊ ಬಿತ್ತನೆ ಮಾಡುತ್ತಾರೆ. ಸರ್ಕಾರ ಒಂಬತ್ತು ಸಾವಿರ ಬೆಲೆ ನಿಗದಿ ಮಾಡಿ ಜನರಲ್ ಅವರಿಗೆ 1400 ಸಬ್ಸಿಡಿ ನೀಡಿ 7600 ರೂ ಮತ್ತು ಎಸ್ಸಿ ಎಸ್ಟಿ ಅವರಿಗೆ 2100 ಸಬ್ಸಿಡಿ ನೀಡಿ 6900 ಕ್ಕೆ ಬಿತ್ತನೆ ಬೀಜ ನೀಡಲಾಗುತ್ತದೆ. ನಮ್ಮ ಕ್ಷೇತ್ರದ ಹೆಚ್ಚು ಶೇಂಗಾ ಬೆಳೆಗಾರರಿದ್ದು ಗ್ರಾಮೀಣ ಭಾಗದಲ್ಲಿ 5900 ರೂಗೆ ಬಿತ್ತನೆ ಬೀಜ ನೀಡುವ ಮೂಲಕ ಸರ್ಕಾರದ ದರಕ್ಕಿಂತ ಕಡಿಮೆ ದರದಲ್ಲಿ ಬಿತ್ತನೆ ಬೀಜ ಮಾರಟ ಮಾಡುತ್ತಿದ್ದಾರೆ ಎಂದು ಸಚಿವರ ಗಮನಕ್ಕೆ ತಂದರು.

2019 –20 ಸಾಲಿನ ಬಜೆಟ್ ನಲ್ಲಿ ಮೊಳಕಾಲ್ಮುರು, ಚಳ್ಳಕೆರೆ, ಶಿರಾ, ಮಧುಗಿರಿ, ಪಾವಗಡ ಕ್ಷೇತ್ರಕ್ಕೆ 50 ಕೋಟಿ ಹಣವನ್ನು ವಿಶೇಷವಾಗಿ ಈ ಐದು ತಾಲೂಕಿನ ಶೇಂಗಾ ಬೆಳೆ ಪ್ರೋತ್ಸಾಹ ನೀಡಲು ರೈತರಿಗೆ ನೆರವು ಆಗಬೇಕು ಹಣ ಮೀಸಲಿಡಲಾಗಿತ್ತು. ಆದ್ದರಿಂದ ನಮ್ಮ ಭಾಗದಲ್ಲಿ ಹೆಚ್ಚು ಟಿಎಂವಿ–2 ಶೇಂಗಾ ಬಿತ್ತನೆ ಮಾಡುತ್ತಾರೆ. ಕದರಿ ಲೇಪಾಕ್ಷಿ ಬೀಜ ನೀರಾವರಿಗೆ ಹೆಚ್ಚು ಬಳಕೆಯಾಗುತ್ತದೆ. ಪ್ರತಿ ಬಾರಿ ಸಹ ಶೇಂಗಾ ಬೆಲೆ ನಿಗದಿಯಾದ ನಂತರ ಸಾಕಷ್ಟು ಬಾರಿ ಸಬ್ಸಿಡಿ ರೂಪದಲ್ಲಿ ಅಥವಾ ಖರೀದಿಯಲ್ಲಿ ರೈತರಿಗೆ ನೆರವು ನೀಡಿ ಬೆಲೆಯನ್ನು ಕಡಿಮೆ ಮಾಡಿದ್ದು ಈ ಬಾರಿ ಸಬ್ಸಿಡಿ ನೀಡಿ ರೈತರ ಪರವಾಗಿ ನಮ್ಮ ಸರ್ಕಾರ ನಿಲ್ಲಬೇಕು.ಚಿತ್ರದುರ್ಗ ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ರೈತರು ಸಭೆ ನಡೆಸಿ ಬೆಲೆ ಕಡಿಮೆ ಮಾಡುವಂತೆ ಪ್ರಸ್ತಾವನೆ ಸಹ ಸಲ್ಲಿಸಲಾಗಿದ್ದು ಬೆಲೆ ನಿಗದಿ ಪರಿಶೀಲಿಸಿ ಎಂದು ಸಚಿವರಿಗೆ ಮನವಿ ಮಾಡಿದರು.

ಕೃಷಿ ಸಚಿವರಾದ ಚಲುವರಾಯಸ್ವಾಮಿ ಮಾತನಾಡಿ ಶಾಸಕರಾದ ಟಿ.ರಘುಮೂರ್ತಿ ಅವರು ಹೇಳಿರುವುದು ಉತ್ತಮ ಸಲಹೆಯಾಗಿದೆ.ಈಗಾಗಲೇ ಅರ್ಧದಷ್ಟು ಬೀಜ ಮಾರಟವಾಗಿದೆ. ಬೆಲೆ ನಿಗದಿಗೆ ಒಂದು ಸಮಿತಿ ಇದ್ದು ಎಲ್ಲಾವನ್ನು ಅಧ್ಯಯನ ಮಾಡಿ ಮಾಡಿರುತ್ತಾರೆ. ಈಗ ಬೆಲೆ ಕಡಿಮೆ ಮಾಡುವುದು ಸೂಕ್ತವಲ್ಲ ಎಂದಾಗ ಶಾಸಕ ಟಿ.ರಘುಮೂರ್ತಿ ಮಧ್ಯ ಪ್ರವೇಶಿಸಿ ಕಳೆದ 11 ವರ್ಷಗಳಿಂದ ಶಾಸಕನಾಗಿದ್ದು ಎಲ್ಲಾ ಸರ್ಕಾರಗಳಲ್ಲಿ ಸರ್ಕಾರ ಬೆಲೆ ನಿಗದಿ ಮಾಡಿ ನಂತರ ಪರಿಶೀಲಿಸಿ ಸಬ್ಸಿಡಿ ಹೆಚ್ಚಿಸಿ ನೆರವಾಗಿದ್ದು ದಯಮಾಡಿ ಪರಿಶೀಲಿಸಿ ಅನುಕೂಲ ಮಾಡಿಕೊಡಬೇಕು ಎಂದಾಗ ಸಚಿವರ ಪರಿಶೀಲಿಸುತ್ತೇನೆ ಎಂದು ಉತ್ತರ ನೀಡಿದರು.

## ಬಿಬಿಎಂಪಿ ಸಿಬ್ಬಂದಿ ವರ್ಗಾವಣೆಗೂ ಮುನ್ನ ಗಮನಕ್ಕೆ ತನ್ನಿ

» **ಬೆಂಗಳೂರು**



ಇಲಾಖೆಯ ವ್ಯಾಪ್ತಿಯಲ್ಲಿನ ತಮ್ಮ ಗಮನಕ್ಕೆ ತರದೇ ಅಧಿಕಾರಿಗಳ ವರ್ಗಾವಣೆ ಮಾಡದಂತೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಿಬಿಎಂಪಿ ಮುಖ್ಯ ಆಯುಕ್ತರಿಗೆ ಸೂಚಿಸಿದ್ದಾರೆ. ಬೆಂಗಳೂರು ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ ಕೆಲವು ವರ್ಗಾವಣೆ ಟಿಪ್ಪಣಿಗಳು ಬರುತ್ತಿದ್ದು, ಇಲಾಖೆಗಳಿಗೆ ಸಂಬಂಧಪಟ್ಟಎಲ್ಲಾ ಅಧಿಕಾರಿ, ಸಿಬ್ಬಂದಿ ತಮ್ಮ ಗಮನಕ್ಕೆ ತರದೇ ವರ್ಗಾವಣೆ, ನಿಯೋಜನೆ, ಸ್ಥಳ ನಿಯೋಕ್ತಿಗೊಳಿಸಿ ಯಾವುದೇ ಆದೇಶ ಹೊರಡಿಸಬಾರದು.ಜತೆಗೆ, ಆದೇಶ ಹೊರಡಿಸುವ ಪೂರ್ವದಲ್ಲಿ ನನ್ನ ಗಮನಕ್ಕೆ ತರಬೇಕೆಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಬಿಬಿಎಂಪಿ ಮುಖ್ಯ ಆಯುಕ್ತರಿಗೆ ನಿರ್ದೇಶಿಸಿದ್ದಾರೆ.

**ಒಟ್ಟು 9 ಅಧಿಕಾರಿಗಳ ವರ್ಗಾವಣೆ:** ಒಟ್ಟು ಐದು ಮಂದಿ ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಮೂವರು ಕಂದಾಯ ಪರಿವೀಕ್ಷಕರನ್ನು ಆರ್‌ಆರ್ ನಗರ ವಲಯ ಸೇರಿದಂತೆ ವಿವಿಧ ಸ್ಥಳಗಳಿಗೆ ವರ್ಗಾವಣೆಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಅನುಮೋದನೆ ನೀಡಿದ್ದಾರೆ.

**ಗುತ್ತಿಗೆದಾರರಿಗೆ ಬಾಕಿ ಬಿಲ್ ಪಾವತಿಯ ಭರವಸೆ:** ಬಿಬಿಎಂಪಿ ಮತ್ತು ಸರ್ಕಾರದ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳ ಬಿಲ್‌ಗಳನ್ನು ಪಾಲಿಕೆ ಮುಖ್ಯ ಆಯುಕ್ತರೊಂದಿಗೆ ಚರ್ಚಿಸಿ ಬಿಡುಗಡೆಗೆ ಕ್ರಮ ವಹಿಸುವುದಾಗಿ ಉಪ ಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ. ಬಿಬಿಎಂಪಿ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳು ಬುಧವಾರ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ, ನಗರದಲ್ಲಿ ನಡೆಸಲಾಗಿರುವ ಕಾಮಗಾರಿಗಳ ಬಿಲ್ ತಡೆಹಿಡಿಯಲಾಗಿದ್ದು, ತ್ವರಿತವಾಗಿ ಬಾಕಿ ಬಿಲ್ ಬಿಡುಗಡೆ ಮಾಡಿಸಬೇಕು. ಬಿಬಿಎಂಪಿ ಅನುದಾನದಲ್ಲಿಕೈಗೊಂಡಿರುವಹಾಗೂಸರ್ಕಾರದ ಅಮೃತ ನಗರೋತ್ಥಾನ ಯೋಜನೆಯಡಿ ಕೈಗೊಳ್ಳಲಾಗಿರುವ ಕಾಮಗಾರಿಗಳ .675 ಕೋಟಿ ಬಿಲ್ ಮೊತ್ತ ಬಿಡುಗಡೆ ಮಾಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರಿಗೆ ಸೂಚಿಸಬೇಕು ಎಂದು ಕೋರಿದರು. ಪ್ರಸ್ತುತ ಬಿಬಿಎಂಪಿ ಅನುದಾನದಲ್ಲಿ ಏಪ್ರಿಲ್ 2021ರಿಂದ ಜೂನ್ 2023ರವರೆಗಿನ ಕಾಮಗಾರಿಗಳಿಗೆ ಸುಮಾರು .2,500 ಕೋಟಿ ಬಿಲ್ ಬಾಕಿ ಇದೆ. ಸಾಲ ಮಾಡಿ ಕಾಮಗಾರಿ ಮಾಡಿರುವ ಗುತ್ತಿಗೆದಾರರು ಆರ್ಥಿಕವಾಗಿ ಸಂಕಷ್ಟದಲ್ಲಿದ್ದಾರೆ.

ಸಾಲ ಬಾಧೆ ತಾಳಲಾರದೆ ಕೆಲವು ಗುತ್ತಿಗೆದಾರರು ಆತ್ಮಹತ್ಯೆ ಮಾಡಿಕೊಳ್ಳುವ ಹಂತಕ್ಕೆ ಹೋಗಿದ್ದಾರೆ. ಬಿಬಿಎಂಪಿ ಅಧಿಕಾರಿ ವರ್ಗದ ಮಾಹಿತಿಯಂತೆ ಪ್ರಸಕ್ತ ವರ್ಷ ಆಸ್ತಿ ತೆರಿಗೆಯಿಂದ .1,500 ಕೋಟಿ ಸಂಗ್ರಹವಾಗಿದೆ. ಇದರಿಂದ ಕೂಡಲೇ 12 ತಿಂಗಳ ಜನರಲ್ ಎಲ್‌ಒಸಿ ಬಿಡುಗಡೆ ಮಾಡುವಂತೆ ಮುಖ್ಯ ಆಯುಕ್ತರಿಗೆ ನಿರ್ದೇಶಿಸಬೇಕು ಎಂದು ಮನವಿ ಮಾಡಿದರು. ಸಂಘದ ಪ್ರಧಾನ ಪೋಷಕ ಕೆಂಪಣ್ಣ, ಅಧ್ಯಕ್ಷ ಅಂಬಿಕಾಪತಿ, ಕಾರ್ಯಾಧ್ಯಕ್ಷ ಜಿ.ಎಂ.ರವೀಂದ್ರ ಸೇರಿದಂತೆ ಇನ್ನಿತರ ಪದಾಧಿಕಾರಿಗಳಿದ್ದರು.

## ಬೆಳಗ್ಗೆ ಸಮಯದಲ್ಲಿ ತ್ರೀ ಫೇಸ್ ವಿದ್ಯುತ್ ನೀಡಲು ಚಿಂತನೆ



**ಬೆಂಗಳೂರು:** ರಾಜ್ಯದ ರೈತರಿಗೆ ಕೃಷಿ ಸಚಿವ ಚಲುವರಾಯಸ್ವಾಮಿ ಗುಡ್ ನ್ಯೂಸ್ ನೀಡಿದ್ದು, ಬೆಳಗ್ಗೆಯೂ ತ್ರೀ ಫೇಸ್ ವಿದ್ಯುತ್ ನೀಡಲಾಗುವುದು ಎಂದು ಹೇಳಿದ್ದಾರೆ. ಈ ಬಗ್ಗೆ ಮಾತನಾಡಿದ ಸಚಿವರು ಬೆಳಗ್ಗೆಯೂ ತ್ರಿ ಫೇಸ್ ನಲ್ಲಿ ವಿದ್ಯುತ್ ಕೊಡುವ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚರ್ಚೆ ನಡೆದಿದೆ.

ಶೀಘ್ರದಲ್ಲೇ ಈ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಚಿವರು ಹೇಳಿದರು. ರಾತ್ರಿ ಹೊತ್ತು ಹೊಲಗಳಿಗೆ ನೀರು ಹಾಯಿಸಲು ಹೋಗುವುದು ಬಹಳ ಅಪಾಯಕಾರಿ, ಕಾಡು ಪ್ರದೇಶಗಳಲ್ಲಿ ವನ್ಯ ಜೀವಿಗಳಿಂದ ಅಪಾಯವಾಗುವ ಸಾಧ್ಯತೆ ಹೆಚ್ಚಿರುತ್ತದೆ. ಈ ವಿಚಾರ ನಮ್ಮ ಗಮನಕ್ಕೆ ಬಂದಿದ್ದು, ಬೆಳಗ್ಗೆ ಸಮಯದಲ್ಲೇ ತ್ರಿ ಫೇಸ್ ನಲ್ಲಿ ವಿದ್ಯುತ್ ಕೊಡುವ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚರ್ಚೆ ನಡೆದಿದೆ. ಅಧಿವೇಶನ ನಡೆದ ಬಳಿಕ ಈ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಚಿವರು ಹೇಳಿದರು.

**ಪ್ರಮುಖ ಸುದ್ದಿ**

# ಶಕ್ತಿ ಯೋಜನೆ ಎಫೆಕ್ಟ್: ಮೊಮ್ಮಗುವನ್ನು ಎತ್ತಿಕೊಂಡು ಬಸ್ ಮೆಟ್ಟಿಲಲ್ಲಿ ಕುಳಿತ ಅಜ್ಜಿ

» **ಕೊಪ್ಪಳ**

ರಾಜ್ಯದಲ್ಲಿ ಶಕ್ತಿ ಯೋಜನೆ ಜಾರಿಯಾದ ಹಿನ್ನಲೆ ಹಲವು ರೀತಿ ಅವಘಡಗಳು ಸಂಭವಿಸುತ್ತಿವಿ. ಈ ಮಧ್ಯೆ ಕೊಪ್ಪಳದಲ್ಲಿ ಸಹ ಪ್ರಯಾಣಿಕರಿಗೆ ಕನಿಷ್ಠ ಮಾನವೀಯತೆ ಇಲ್ಲದಂತೆ ವರ್ತಿಸಿದ ಘಟನೆ ಬೆಳಕಿಗೆ ಬಂದಿದೆ.ಕೊಪ್ಪಳದಿಂದ ಹುಲಿಗಿಗೆ ಬಸ್ ನ ಬಾಗಿಲಿನ ಮೆಟ್ಟಿಲು ಮೇಲೆ ಮೊಮ್ಮಗನನ್ನು ಹಿಡಿದು ಅಜ್ಜಿ ಕುಳಿತಿದ್ದಳು.



ಈ ಬಸ್ ನಲ್ಲಿ ಪ್ರಯಾಣಿಕರಿಂದ ತುಂಬಿತ್ತು. ಇದೇ ಬಸ್ ನಲ್ಲಿ ಪ್ರಯಾಣಿಸುತ್ತಿದ್ದ ಅಜ್ಜಿ ತನ್ನ ಮೊಮ್ಮೊಗುವಿಗೆ ಜಾಗ ಇರಲಿಲ್ಲ. ಬಸ್ ನಲ್ಲಿ ಮಗುವಿಗೆ ಗಾಳಿಯಾಡದ ಹಿನ್ನಲೆ ಬಸ್ ಡೋರ್ ನ ಮೆಟ್ಟಿಲು ಮೇಲೆ ಕುಳಿತಿದ್ದಳು.ಸೀಟ್ ಇಲ್ಲದ ಕಾರಣ ಬಸ್ ಡೋರ್ ಮೆಟ್ಟಿಲು ಮೇಲೆ ಕುಳಿತಿರುವ ದೃಶ್ಯ ಮೊಬೈಲ್ ಕ್ಯಾಮೆರಾದಲ್ಲಿ ಸೆರೆಯಾಗಿವೆ. ಒಳಗಡೆ ಕುಳಿತುಕೊಳ್ಳಲು ಹೇಳಿದರು.

ಬಸ್ ತುಂಬಿದ್ದ ಹಿನ್ನಲೆ ಡೋರ್ ಮೆಟ್ಟಿಲು ಬಳಿ ಕುಳಿತಿದ್ದಳು. ಚಲಿಸುವ ಬಸ್ ನ ಡೋರ್ ಹಾಕಿಕೊಳ್ಳಬೇಕು, ಅಪಾಯ ತಂದೊಡ್ಡುವ ಇಂಥ ಪ್ರಕರಣಗಳ ಬಗ್ಗೆ ಕಾಳಜಿ ವಹಿಸಬೇಕಾದ ಹುಲಿಗಿಯಿಂದ ಕಂಡಕ್ಟರ್, ಡ್ರೈವರ್ ಮೌನವಾಗಿದ್ದರು. ಕನಿಷ್ಠ ಯಾರಾದರೂ ಪ್ರಯಾಣಿಕರು ಅಜ್ಜಿಗೆ ಸೀಟು ಬಿಟ್ಟುಕೊಡಬಹುದಾಗಿತ್ತು. ಈ ಸಂದರ್ಭದಲ್ಲಿ ಪ್ರಯಾಣಿಕರು ಮಾನವೀಯತೆ ಮರೆತಂತೆ ಕಂಡು ಬಂತು.




## ಫಾಸ್ಟ್ ನ್ಯೂಸ್

### ಬಿಪಿಎಲ್ ಕಾರ್ಡ್‌ಗೆ ಅರ್ಜಿ ಸಲ್ಲಿಸಲು ಶೀಘ್ರ ಪರಿಶೀಲನೆ

» ಬೆಂಗಳೂರು

ಬಿಪಿಎಲ್ ಪಡಿತರ ಕಾರ್ಡ್ ಗೆ ಅರ್ಜಿ ಸಲ್ಲಿಸಿದವರಿಗೆ ರಾಜ್ಯ ಸರ್ಕಾರವು ಸಿಹಿಸುದ್ದಿ ನೀಡಿದ್ದು, ಶೀಘ್ರವೇ ಕಾರ್ಡ್ ಗಳನ್ನು ವಿತರಣೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ ಹೇಳಿದ್ದಾರೆ. ವಿಧಾನಪರಿಷತ್ ನಲ್ಲಿ ಈ ಬಗ್ಗೆ ಮಾಹಿತಿ ನೀಡಿರುವ ಸಚಿವರು, ರಾಜ್ಯದಲ್ಲಿ ಬಿಪಿಎಲ್ ಕಾರ್ಡ್ ಬಯಸಿ ಹೊಸದಾಗಿ 3 ಲಕ್ಷ ಅರ್ಜಿಗಳು ಸಲ್ಲಿಕೆಯಾಗಿದ್ದು, ಪರಿಶೀಲನೆ ಕಾರ್ಯ ಪ್ರಗತಿಯಲ್ಲಿದೆ. ಈಗಾಗಲೇ 1.28 ಕೋಟಿ ಕೋಟಿ ಬಿಪಿಎಲ್ ಕಾರ್ಡ್ ಗಳು ಹಂಚಿಕೆಯಾಗಿವೆ ಎಂದು ತಿಳಿಸಿದ್ದಾರೆ. ಹೊಸದಾಗಿ ಬಿಪಿಎಲ್ ಕಾರ್ಡ್ ಕೋರಿ ಸಲ್ಲಿಸಿದ ಅರ್ಜಿಗಳ ಪರಿಶೀಲನೆ ಮಾಡಲಾಗುತ್ತಿದ್ದು, ಪರಿಶೀಲನೆ ನಂತರ ಹಣಕಾಸು ಅನುಮತಿ ಪಡೆದು ಕ್ರಮ ವಹಿಸಲಾಗುವುದು ಎಂದು ಹೇಳಿದ್ದಾರೆ.

### ಬಾಲಕ ನಾಪತ್ತೆ

» ಚಿತ್ರದುರ್ಗ



ಕಳೆದ ಮೇ. 22 ರಂದು ಬಡಾವಣೆ ಠಾಣೆಯಿಂದ ಸರ್ಕಾರಿ ಬಾಲ ಮಂದಿರಕ್ಕೆ ದಾಖಲಿಸಲಾಗಿದ್ದ ಬಳ್ಳಾರಿಯ ಬಾಲಕ ರಾಜೇಶ್ ಕಾಣೆಯಾಗಿದ್ದಾನೆ. ಬಾಲಮಂದಿರಕ್ಕೆ ದಾಖಲಾಗಿದ್ದ ಸುಮಾರು ಹದಿಮೂರುವರ್ಷದಬಾಲಕ ರಾಜೇಶ್ ಫಿಡ್ಸ್ ಬಂದ ರೀತಿಯಲ್ಲಿದ್ದುದರಿಂದ ಬಾಲಮಂದಿರದ ರಕ್ಷಕ ವೆಂಕಟೇಶ್ ಹಾಗೂ ಶಶಿಕಲ ಇವರುಗಳು ಆರೋಗ್ಯ ಸಿಬ್ಬಂದಿಯೊಂದಿಗೆ ಜಿಲ್ಲಾಸ್ಪತ್ರೆಗೆ ದಾಖಲಿಸಿದ ಸಂದರ್ಭದಲ್ಲಿ ಆಸ್ಪತ್ರೆಯಿಂದ ಕಾಣೆಯಾಗಿರುತ್ತಾನೆ. ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಹಾಗೂ ಕಪ್ಪು ಟೀಶರ್ಟ್ ಧರಿಸಿದ್ದು, ಕನ್ನಡ ಮತ್ತು ತೆಲುಗು ಮಾತನಾಡುತ್ತಾನೆ. ಎಲ್ಲಿಯಾದರೂ ಕಂಡು ಬಂದಲ್ಲಿ ನಗರ ಪೊಲೀಸ್ ಠಾಣೆಗೆ ಮಾಹಿತಿ ನೀಡಬಹುದಾಗಿದೆ ಎಂದು ನಗರ ಪೊಲೀಸ್ ಠಾಣೆ ಸಬ್‌ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ. ಮೊ: 9480803146 ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ.

### ಎಸ್‌ಸಿಪಿ, ಟಿಎಸ್‌ಪಿ ಸಮಿತಿ ಸಭೆ ಮೂಂದೂಡಿಕೆ

» ದಾವಣಗೆರೆ

ಪರಿಶಿಷ್ಟ ವಿಶೇಷ ಘಟಕ ಯೊಜನೆ ಪರಿಶಿಷ್ಟ ಪಂಗಡದ ಗಿರಿಜನ ಉಪಯೋಜನೆ, ಬುಡಕಟ್ಟು ಉಪಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಅಭಿವೃದ್ಧಿ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯನ್ನು ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜುಲೈ 18 ರಂದು ಬೆಳಿಗ್ಗೆ 11 ಗಂಟೆಗೆ ಮೂಂದೂಡಲಾಗಿದೆ ಎಂದುಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ನಾಗರಾಜ್ .ಕೆ ತಿಳಿಸಿದ್ದಾರೆ.

### ಕೆ.ಎ.ಎಸ್ ಹುದ್ದೆಗಾಗಿ ಸ್ಪರ್ಧಾತ್ಮಕ ಪರೀಕ್ಷೆ, ಉಚಿತ ತರಬೇತಿ

» ದಾವಣಗೆರೆ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಹಾಗೂ ಜಿಎಂ ತಾಂತ್ರಿಕ ಮಹಾವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ಲೋಕಸೇವಾ ಆಯೋಗ ಇವರು ನಡೆಸುವ ಕೆ.ಎ.ಎಸ್. ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲಿರುವ ಅಭ್ಯರ್ಥಿಗಳಿಗೆ ಜುಲೈ 17 ರಿಂದ 26 ರವರೆಗೆ ರೂಂ ನಂ:104, 3ನೇ ಮಹಡಿ, ಇಂಜಿನಿಯರಿಂಗ್ ಬ್ಲಾಕ್, ಜಿಎಂ ತಾಂತ್ರಿಕ ಮಹಾವಿದ್ಯಾಲಯ, ಕರೂರು ಇಂಡಸ್ಟ್ರಿಯಲ್ ಏರಿಯಾ, ಪಿ.ಬಿ. ರಸ್ತೆ, ದಾವಣಗೆರೆ ಇಲ್ಲಿ "ಉಚಿತ ಪರೀಕ್ಷಾಪೂರ್ವ ತರಬೇತಿ" ಯನ್ನು ಆಯೋಜಿಸಲಾಗಿದೆ. ತರಬೇತಿಗೆ ಹಾಜರಾಗಲಿಚ್ಛಿಸುವ ಅಭ್ಯರ್ಥಿಗಳು ದಿನಾಂಕ : 17-07-2023ರ ಬೆಳಿಗ್ಗೆ 10-00 ಗಂಟೆಗೆ ತಮ್ಮ ಸ್ವಂತ ಖರ್ಚಿನಲ್ಲಿ ತರಬೇತಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 7406323294 & 8618166204 ಯನ್ನು ಸಂಪರ್ಕಿಸಲು ಉದ್ಯೋಗಾಧಿಕಾರಿ ರವೀಂದ್ರ ಡಿ ತಿಳಿಸಿದ್ದಾರೆ.

### ರಾಮಗಿರಿಯಲ್ಲಿ 40 ಮಿ.ಮೀ ಮಳೆ

» ಚಿತ್ರದುರ್ಗ

ಮಳೆಯ ವಿವರದನ್ವಯ ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ರಾಮಗಿರಿಯಲ್ಲಿ 40 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯ ಅತ್ಯಧಿಕ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 8.8 ಮಿ.ಮೀ, ಚಿಕ್ಕಜಾಜೂರು 2.2 ಮಿ.ಮೀ, ಬಿ. ದುರ್ಗ 3.2 ಮಿ.ಮೀ, ಹೆ□□ಡ ಪುರ 3.6 ಮಿ.ಮೀ, ತಾಳ್ಯ 3 ಮಿ.ಮೀ ಮಳೆಯಾಗಿದೆ. ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ 7.2 ಮಿ.ಮೀ, ತಳಕು 1 ಮಿ.ಮೀ, ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 6.4 ಮಿ.ಮೀ, ಬಾಗೂರು 2.2 ಮಿ.ಮೀ, ಮತ್ತೋಡು 9.4 ಮಿ.ಮೀ, ಶ್ರೀರಾಂಪುರದಲ್ಲಿ 3 ಮಿ.ಮೀ ಮಳೆಯಾಗಿದೆ.

# ಹ್ಯುಂಡೈನಿಂದ ಎಸ್‌ಯುವಿ ಎಕ್ಸ್‌ಟರ್ ಬಿಡುಗಡೆ

» ಬೆಂಗಳೂರು











ಹ್ಯುಂಡೈ ಮೋಟಾರ್ಸ್ ಇಂಡಿಯಾ ಲಿಮಿಟೆಡ್ ಸೋಮವಾರ ಮಧ್ಯಮ ವರ್ಗದ ಜನರನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸ ಮಾಡಲಾದ ಹೊಸ ಎಸ್‌ಯುವಿ ಹ್ಯುಂಡೈ ಎಕ್ಸ್‌ಟರ್ ಮಾರುಕಟ್ಟೆಗೆ ಪರಿಚಯಿಸಿದೆ.

ಹ್ಯುಂಡೈ ಎಕ್ಸ್‌ಟರ್ ಮಾರುಕಟ್ಟೆಗೆ ಬಿಡುಗಡೆಗೊಳಿಸಿ ಮಾತನಾಡಿದ ಹ್ಯುಂಡೈ ಮೋಟಾರ್ಸ್ ಇಂಡಿಯಾ ಲಿಮಿಟೆಡ್ ಎಂಡಿ ಮತ್ತು ಸಿಇಒ ಉನ್ಸೋ ಕಿಮ್, ಎಸ್ ಯುವಿ ಹ್ಯುಂಡೈ ಎಕ್ಸ್‌ಟರ್ ಮಾರುಕಟ್ಟೆಗೆ ಪರಿಚಯಿಸುವ ಮೂಲಕ ಹೊಸ ಮೈಲಿಗಲ್ಲು ಸೃಷ್ಟಿಸಿದೆ.

ಎಕ್ಸ್‌ಟರ್ ನವೀನ ವಿನ್ಯಾಸ, ಆಧುನಿಕ ತಂತ್ರಜ್ಞಾನ ಮತ್ತು ಅಸಾಧಾರಣ ಕಾರ್ಯಕ್ಷಮತೆಗೆ ಹುಂಡೈನ ಬದ್ಧತೆ ಹೊಂದಿದೆ. ಅತ್ಯಾಧುನಿಕ ತಂತ್ರಜ್ಞಾನ ಮತ್ತು ಸಾಟಿಯಿಲ್ಲದ ಸುರಕ್ಷತಾ ವೈಶಿಷ್ಟಗಳೊಂದಿಗೆ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಮಾರುಕಟ್ಟೆಗೆ ಬಿಡುಗಡೆ ಮಾಡಲಾಗಿದೆ. ಎಸ್‌ಯುವಿ ಮಧ್ಯಮ ವರ್ಗದವರ ಮನ ಗೆಲ್ಲುವ ವಿಶ್ವಾಸದಲ್ಲಿದೆ ಎಂದರು.

ಎಕ್ಸ್ ಶೋರೂಮ್‌ನಲ್ಲಿ ಎಸ್ ಯುವಿ ಹ್ಯುಂಡೈ ಎಕ್ಸ್‌ಟರ್ 5,99,900 ರೂ.ನಿಂದ 9,31,990 ರೂ.ಇದೆ. ವೇರಿಯಂಟ್ ಎಕ್ಸ್ 5,90,900 ರೂ., ಎಸ್ 7,26,990 ರೂ., ಎಸ್‌ಎಕ್ಸ್ 7,99,990ರೂ., ಎಸ್‌ಎಕ್ಸ್(ಒ)8,63,990 ರೂ., ಎಸ್‌ಎಕ್ಸ್ (ಒ) ಕನೆಕ್ಟ್9,31,990 ರೂ. ನಿಗದಿ ಪಡಿಸಿದೆ. ಮೂರು ವರ್ಷಗಳ ಅನಿಯಮಿತ ಕಿ.ಮಿ. ವಾರೆಂಟಿ ಲಭ್ಯವಿದೆ. ಈ ವಾರೆಂಟಿಯನ್ನು ಗ್ರಾಹಕರು 7ವರ್ಷಗಳ ವರೆಗೆ ವಿಸ್ತರಿಸಲು ಅವಕಾಶ ಕಲ್ಪಿಸಲಾಗಿದೆ.ಗ್ರಾಹಕರಿಗೆ ಹ್ಯುಂಡೈ ಎಕ್ಸ್‌ಟರ್‌ನಲ್ಲಿ 6 ಮೊನೊಟೋನ್ ಮತ್ತು 3ಡ್ಯುಯಲ್ ಟೋನ್ ಸೇರಿದಂತೆ ಒಟ್ಟು 9 ಬಣ್ಣ ಆಯ್ಕೆಗಳಿವೆ. ಡ್ಯುಯಲ್ ಕ್ಯಾಮೆರಾದೊಂದಿಗೆ ಡ್ಯಾಶ್ ಕ್ಯಾಮೆರಾ, 5.84ಸೆ.ಮೀ. ಡೀಸ್‌ಪ್ಲೇ, ಎಚ್‌ಡಿ ವಿಡಿಯೋ ಕ್ವಾಲಿಟಿ, ಆಪಲ್ ಕಾರ್ ಪ್ಲೇ ಮತ್ತು ಆಂಡ್ರಾಯ್ಡ್ ಆಟೋ ಜತೆಗೆ 8ಇಂಚಿನ ಟಚ್ ಸ್ಕ್ರೀನ್ ಇನ್ಫೋಟೈನ್ಮೆಂಟ್, ಪ್ರಯಾಣ ಎಲ್ಲ ಕ್ಷಣಗಳನ್ನು ಸೆರೆ ಹಿಡಿಯುವ ರೆಕಾರ್ಡಿಂಗ್ ಮೋಡ್, ಫೋನ್ ವೈರ್‌ಲೈಸ್ ಚಾರ್ಜರ್, ಆಟೋಮ್ಯಾಟಿಕ್ ಎಸಿ ಕಂಟ್ರೋಲ್ ರೈನ್ ಸೆನ್ಸರ್ ಮುಂಭಾಗದ ಹಾಗೂ ಹಿಂಭಾಗದ ವೈಪರ್ ಸೇರಿ ಸಾಕಷ್ಟು ವೈಶಿಷ್ಟ್ಯಗಳನ್ನು ಇದು ಹೊಂದಿದೆ.

ಸುರಕ್ಷತೆಗೆ ಸಂಬಂಧಿಸಿದಂತೆ ಹೆಚ್ಚಿನ ಆದ್ಯತೆ ನೀಡಿದ್ದು, ಮುಂಭಾಗದಲ್ಲಿ ಎಲೆಕ್ಟ್ರಾನಿಕ್ ಸ್ಟೆಬಿಲಿಟಿ ಕಂಟ್ರೋಲ್, ವೆಹಿಕಲ್ ಸ್ಟೆಬಿಲಿಟಿ ಮ್ಯಾನೇಜ್ಮೆಂಟ್, ಹಿಲ್ ಅಸಿಸ್ಟ್ , ಕಂಟ್ರೋಲ್ ಪಾರ್ಕಿಂಗ್ ಸೆನ್ಸರ್, ಟಿಪಿಎಂಎಸ್ (ಹೈಲೈನ್) ಹಾಗೂ ಆರು ಏರ್‌ಬ್ಯಾಗ್ ಸೇರಿದಂತೆ ಸಾಕಷ್ಟಯ ವೈಶಿಷ್ಟ ಗಳಿವೆ ಎಂದು ಪ್ರಕಟಣೆ ತಿಳಿಸಿದೆ.

## ಸಂಚಾರಿ ನಿಯಮ ಪ್ರತಿಯೊಬ್ಬರೂ ಪಾಲಿಸಬೇಕು

» ದಾವಣಗೆರೆ



ವಾಹನಗಳು ಯಾವುದೇ ಇರಲಿ ಚಲಾಯಿಸಲು ಅನುಮತಿ ಕಡ್ಡಾಯವಾಗಿದ್ದು, ಪ್ರತಿಯೊಬ್ಬರೂ ಸಂಚಾರಿ ನಿಯಮಗಳನ್ನು ಪಾಲಿಸಬೇಕು ಎಂದು ಸಂಚಾರಿ ಪೊಲೀಸ್ ವೃತ್ತ ವಿಭಾಗದ ಸಹಾಯಕ ಸಬ್‌ಇನ್ಸ್‌ಪೆಕ್ಟರ್ ಜಯಪ್ಪ ತಿಳಿಸಿದರು.

ನಗರದ ಎಸ್.ನಿಜಲಿಂಗಪ್ಪ ಬಡಾವಣೆ ಯಲ್ಲಿರುವ ಗಂಗೂಬಾಯಿ ಹಾನಗಲ್ ಪಾರ್ಕ್(ಟ್ರಾಫಿಕ್ ಪಾರ್ಕ್)ನಲ್ಲಿ ದಿ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್,ಕರ್ನಾಟಕ ಕೊಂಡಜ್ಜಿ ಬಸಪ್ಪ ಸ್ಥಳೀಯ ಸಂಸ್ಥೆ, ದಾವಣಗೆರೆ ಜಿಲ್ಲಾ ಪೊಲೀಸ್ ಇಲಾಖೆ ಸಹಯೋಗದಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಕಬ್ಸ್, ಬುಲ್ ಬುಲ್ಸ್ ಮಕ್ಕಳಿಗೆ ಆಯೋಜಿಸಿದ ಸಂಚಾರಿ ನಿಯಮಗಳ ಜಾಗೃತಿ, ಅರಿವು ಕಾರ್ಯಕ್ರಮದಲ್ಲಿ ಅವರು ಮಾಹಿತಿ ನೀಡಿದರು.

ವಾಹನಗಳಲ್ಲಿ 3 ಜನರು ತೆರಳಬಾರದು, ಹೆಲ್ಮೆಟ್ ಇಲ್ಲದೇ ವಾಹನ ಚಲಾಯಿಸಬಾರದು. ಅಪ್ರಾಪ್ತರಾದ ನೀವುಗಳು 18 ವರ್ಷವಾದ ನಂತರ ಅನುಮತಿ ಪತ್ರವನ್ನು ಪಡೆದ ನಂತರ ವಾಹನಗಳನ್ನು ಚಲಾಯಿಸಬೇಕು.

ಎಲ್ಲೆಂದರಲ್ಲಿ ಅಡ್ಡಾದಿಡ್ಡಿಯಾಗಿ ವಾಹನಗಳನ್ನು ನಿಲ್ಲಿಸಬಾರದು, ನಿಗಧಿತ ಸ್ಥಳಗಳಲ್ಲಿ ಮಾತ್ರ ವಾಹನಗಳನ್ನು ಪಾರ್ಕಿಂಗ್ ಮಾಡಬೇಕು ಸೇರಿದಂತೆ ಹಲವಾರು ಸಂಚಾರಿ ನಿಯಮಗಳ ಕುರಿತು ಮಾಹಿತಿ ನೀಡಿದ ಅವರು, ಏನೇ ತಪ್ಪುಗಳು ಕಂಡು ಬಂದಲ್ಲಿ ಇಲಾಖೆಯಿಂದ ದಂಡ ವಿಧಿಸಲಾಗುವುದು ಇಲ್ಲದೇ ಇದ್ದರೆ ಅವರ ಹೆಸರಿಗೆ ದಂಡದ ನೋಟೀಸ್ ತಲುಪಿಸಲಾಗುವುದು ಎಂದರು

ಸಂಚಾರಿ ಪೊಲೀಸ್ ಠಾಣೆಯ ಪೊಲೀಸ್ ಅಧಿಕಾರಿ ಬಸವರಾಜ ಸ್ಕೌಟ್ಸ್ ಮತ್ತು ಗೈಡ್ಸ್ ಕಬ್ಸ್, ಬುಲ್ ಬುಲ್ಸ್ ಮಕ್ಕಳಿಗೆ ಪಾರ್ಕ್‌ನಲ್ಲಿರುವ ಟ್ರಾಫಿಕ್ ರೂಲ್ಸ್ ಫಲಕಗಳನ್ನು ತೋರಿಸಿ ಅವುಗಳ ಬಗ್ಗೆ ಮಾಹಿತಿಯನ್ನು ನೀಡಿದರು.

ಈ ಸಂದರ್ಭದಲ್ಲಿ ಸ್ಕೌಟ್ ಮಾಸ್ಟರ್ ಟಿ.ಎಂ. ರವೀಂದ್ರ ಸ್ವಾಮಿ, ಶಶಿಕುಮಾರ್, ಗೈಡ್ ಕ್ಯಾಪ್ಟನ್ ಅನಿತಾ ಹಾಗೂ ಎಚ್.ಎಂ.ರಜನಿ, ಪೋಷಕರು ಹಾಗೂ ಸೆಂಟ್ ಫಾಲ್ಸ್ ಹೈಸ್ಕೂಲ್ ಗೈಡ್ಸ್ ಹಾಗೂ ಸೆಂಟ್ ಫಾಲ್ಸ್ ಸೆಂಟ್ರಲ್ ಸ್ಕೂಲ್ ಗೈಡ್ಸ್, ಶ್ರೀ ತರಳಬಾಳು ಶಾಲೆಯ ಗೈಡ್ಸ್ ಸ್ಕೌಟ್ಸ್ ಕಬ್ಸ್ ಬುಲ್ ಬುಲ್ಸ್, ಮಾಗನೂರು ಬಸಪ್ಪ ಸ್ಕೌಟ್ಸ್, ಬಾಪೂಜಿ ಓಪನ್ ಸ್ಕೌಟ್ ಟ್ರೂಪ್, ಮದರ್ ತೆರೇಸಾ ಗೈಡ್ ಕಂಪನಿ ಮಕ್ಕಳು ಭಾಗವಹಿಸಿದ್ದರು.

## ಲೋಕಸಭೆ: 20 ಸ್ಥಾನ ಗೆಲ್ಲುವುದೇ ಟಾರ್ಗೆಟ್

» ಬೆಂಗಳೂರು



2024ರ ಲೋಕಸಭೆ ಚುನಾವಣೆಯಲ್ಲಿ ಸುಮಾರು 20 ಸ್ಥಾನಗಳನ್ನು ಗೆಲ್ಲಲು ಕಾಂಗ್ರೆಸ್ ಪಣ ತೊಟ್ಟಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹ್ಮದ್ ಹೇಳಿದ್ದಾರೆ. ಬೆಂಗಳೂರು: 2024ರ ಲೋಕಸಭೆ ಚುನಾವಣೆಯಲ್ಲಿ ಸುಮಾರು 20 ಸ್ಥಾನಗಳನ್ನು ಗೆಲ್ಲಲು ಕಾಂಗ್ರೆಸ್ ಪಣ ತೊಟ್ಟಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹ್ಮದ್ ಹೇಳಿದ್ದಾರೆ.

ಇತ್ತೀಚೆಗಷ್ಟೇ ವಿಧಾನ ಪರಿಷತ್ತಿನ ಮುಖ್ಯ ಸಚೇತಕರಾಗಿ ನೇಮಕಗೊಂಡಿರುವ ಸಲೀಂ ಅಹ್ಮದ್,ಮುಂಬರುವ ಬಿಬಿಎಂಪಿ ಮತ್ತು ಜಿಪಂ ಚುನಾವಣೆಯಲ್ಲೂ ಪಕ್ಷ ಉತ್ತಮ ಪ್ರದರ್ಶನ ನೀಡುವ ವಿಶ್ವಾಸವಿದೆ ಎಂದರು. 2019 ರ ಚುನಾವಣೆಯಲ್ಲಿ, ಕಾಂಗ್ರೆಸ್ ಕೇವಲ ಒಂದು ಸ್ಥಾನ ಗೆದ್ದಿತು. ಬೆಂಗಳೂರು ಗ್ರಾಮಾಂತರದಲ್ಲಿ ಡಿಕೆ ಸುರೇಶ್ ಗೆಲುವು ಕಂಡಿದ್ದರು. ವಿಧಾನಸಭೆ ಚುನಾವಣೆಯಲ್ಲಿ ತನಗೆ ದೊರೆತ ಭಾರೀ ಬೆಂಬಲವನ್ನು ಲೋಕಸಭೆಗೆ ವರ್ಗಾಯಿಸಲು ಕಾಂಗ್ರೆಸ್ ಈಗ ಹವಣಿಸುತ್ತಿದೆ.

ರಾಜ್ಯದ 28 ಸಂಸದೀಯ ಸ್ಥಾನಗಳಲ್ಲಿ ಕಾಂಗ್ರೆಸ್ ಹೆಚ್ಚಿನ ಸ್ಥಾನಗಳಲ್ಲಿಎರಡನೇಸ್ಥಾನದಲ್ಲಿದೆ, ಬಿಜೆಪಿ 25 ಸ್ಥಾನಗಳನ್ನು ಗೆದ್ದಿದೆ. 2014ರಲ್ಲಿ ಕರ್ನಾಟಕದಿಂದ ಕಾಂಗ್ರೆಸ್ ಒಂಬತ್ತು ಸ್ಥಾನಗಳನ್ನು ಗೆದ್ದಿತ್ತು. ಬಿಜೆಪಿ ಸರ್ಕಾರದ ವೈಫಲ್ಯಗಳು ಮತ್ತು ಭ್ರಷ್ಟಾಚಾರದ ವಿಷಯಗಳನ್ನು ಜನರ ಬಳಿಗೆ ಕೊಂಡೊಯ್ಯುತ್ತೇವೆ. ಮೋದಿ ಸರ್ಕಾರ ಕಪ್ಪುಹಣ ವಾಪಸಾತಿ ಮತ್ತು ಪ್ರತಿಯೊಬ್ಬರಿಗೆ 15 ಲಕ್ಷ ರೂಪಾಯಿ ನೀಡುವ ಭರವಸೆಗಳನ್ನು ನೀಡಿತು.

ಪ್ರತಿ ವರ್ಷ 2 ಕೋಟಿ ಉದ್ಯೋಗಗಳನ್ನು ಸೃಷ್ಟಿಸುವುದಾಗಿ ಹೇಳಿತ್ತು, ಆದರೆ ಸರ್ಕಾರ ಆ ಕೆಲಸ ಮಾಡಲಿಲ್ಲ. ರೈತರ ಆದಾಯ ಹೆಚ್ಚಿಸುವ ಭರವಸೆ ನೀಡಿತ್ತು, ಅದನ್ನೂ ಈಡೇರಿಸಲಿಲ್ಲ. ಆದರೆ ಕಾಂಗ್ರೆಸ್ ತನ್ನ ಖಾತರಿ ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಅಹ್ಮದ್ ಹೇಳಿದರು. ಪರಿಷತ್ತಿಗೆ ಮೂರು ಸದಸ್ಯರ ನಾಮನಿರ್ದೇಶನಗಳ ಕುರಿತು ಕೇಳಲಾದ ಪ್ರಶ್ನೆಗೆ, ಶೀಘ್ರದಲ್ಲೇ ಹೆಸರುಗಳನ್ನು ಬಿಡುಗಡೆ ಮಾಡಲಾಗುವುದು ಎಂದು ಹೇಳಿದರು.

## ಜಿ.ಪಂ.ಸಿಇಓ ಎಂ.ಎಸ್.ದಿವಾಕರ್ ಅವರಿಂದ ಈ ಸ್ವತ್ತು ವಿತರಣೆ







ಹೊಳಲ್ಕೆರೆ ಕ್ಷೇತ್ರ ವ್ಯಾಪ್ತಿಯ ಬಿ.ದುರ್ಗ, ಅಂದನೂರು, ಗುಜಿಗನೂರು ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಜಿಲ್ಲಾ ಪಂಚಾಯತ ಸಿಇಓ ಎಂ.ಎಸ್.ದಿವಾಕರ್ ಅವರು ಈ ಸ್ವತ್ತು ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಅಧಿಕಾರಿಗಳು, ಜನ ಪ್ರತಿನಿಧಿಗಳು ಮತ್ತು ಸಾರ್ವಜನಿಕರು ಹಾಜರಿದ್ದರು.

### ಕುಡುತಿನಿ: ಇಂಟರ್ನ್‌ಶಿಪ್ ತರಬೇತಿಗಾಗಿ ಅರ್ಜಿ ಆಹ್ವಾನ

**ಬಳ್ಳಾರಿ:** ಕುಡುತಿನಿ ಪಟ್ಟಣ ಪಂಚಾಯಿತಿಯಿಂದ 2022-23ನೇ ಸಾಲಿಗೆ ಖಿಗಎಖಕ- ಖಿಜ ಗಡಿಛಚಿಟ ಐಜಚಿಡಿಟಿಟಿರ ಖಿಟಿಣಜಡಿಟ್ಟುರಿ ಕಡಿಂಡಿಚಿಟಟಜ ಕಲಿಕಾ ಆಧಾರಿತವಾಗಿದ್ದು, ಇಂಟರ್ನ್‌ಶಿಪ್ ತರಬೇತಿ ಪಡೆಯಲು ಆಸಕ್ತ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ.

## ಪ್ರಮುಖ ಸುದ್ದಿ

# ಜೈನ ಮುನಿಗಳ ಹತ್ಯೆ: ಜೈನ ಒಕ್ಕೂಟದಿಂದ ಪ್ರತಿಭಟನೆ

» ಚಿತ್ರದುರ್ಗ



ಜೈನ್ ಮುನಿಗಳ ಹತ್ಯೆಯನ್ನು ಖಂಡಿಸಿ ನಗರದ ಜೈನ್ ಸಮುದಾಯದ ಒಕ್ಕೂಟ ವತಿಯಿಂದ ಪ್ರತಿಭಟನೆಯನ್ನು ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಲಾಯಿತು.

ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲ್ಲೂಕು, ಹಿರೇಕೋಡಿ ಗ್ರಾಮದಲ್ಲಿ ನಂದಿಪರ್ವತ ಎಂಬ ಆಶ್ರಮದಲ್ಲಿ ಜೈನ ಮಂದಿರವಿದ್ದು ಅಲ್ಲಿ ಆಚಾರ್ಯ ಶ್ರೀ: 108 ಕಾಮ ಕುಮಾರನಂದಿ ಮುನಿ ಮಹಾರಾಜರನ್ನು ಅಪಹರಿಸಿ, ಬರ್ಬರವಾಗಿ ಹತ್ಯೆ ಮಾಡಿ ಅತ್ಯಂತ ಹಿಂಸಾತ್ಮಕ ರೀತಿಯಲ್ಲಿ ಮುನಿಶ್ರೀಗಳ ಶರೀರವನ್ನು ವಿಕೃತಗೊಳಿಸಿ ಕೊಲೆ ಮಾಡಿರುವುದು ಅತ್ಯಂತ ಖಂಡನೀಯವಾಗಿದ್ದು ಇಂತಹ ಕೃತ್ಯವನ್ನು ಸಕಲ ಜೈನ ಸಮಾಜ ಮತ್ತು ಜೈನ ಮಠಗಳು ಎಲ್ಲಾ ಮಠಾಧೀಶರು ಖಂಡನೆ ವ್ಯಕ್ತಪಡಿಸುತ್ತೇವೆ.

ಸರ್ಕಾರ ಮತ್ತು ಸರ್ಕಾರಿ ಅಧಿಕಾರಿಗಳು ಯಶಸ್ವಿ ಕಾರ್ಯಾಚರಣೆಯಿಂದ ಹಂತಕರನ್ನು ಬಂಧಿಸಿ, ಕಾನೂನಾತ್ಮಕವಾದಂತಹ ಕಾರ್ಯ ಚರಣೆಯನ್ನು ಮುಂದುವರೆಸಿದ್ದಾರೆ. ಆದರೆ ಸಂವಿಧಾನ ಹಂತಕರಿಗೆ ಅತ್ಯಂತ ಕಠಿಣ ಮತ್ತು ಅತ್ಯಧಿಕ ಶಿಕ್ಷೆಯನ್ನು ವಿಧಿಸಬೇಕು. ಯಾವುದೇ ರೀತಿಯಾದಂತಹ ಕರುಣೆಯನ್ನು ತೋರಬಾರದು ಎಂದು ಚಿತ್ರದುರ್ಗ ತಾಲ್ಲೂಕು ಜೈನ ಸಮುದಾಯ ಅಸಂಘಟಿತ ವಲಯದಿಂದ ಆಗ್ರಹಿಸಿದೆ.

"ಮುನಿ ಹತ್ಯಾ ದೋಷ ಮಹಾ ಪಾಪವಾಗುರುತ್ತದೆ" ಯಾವ ರೀತಿಯಾಗಿ ದಯವೇ ಮೂಲ ಧರ್ಮವೆಂದು ಲೋಕದ ಎಲ್ಲಾ ಜೀವಿಗಳಲ್ಲಿಯೂ ಸಮತಾ ಭಾವನೆಯನ್ನು ಹೊಂದಿದ ಭಗವಾನ್ ಶ್ರೀ ಮಹಾವೀರಸ್ವಾಮಿಯ ಮೂಲ ಸಂದೇಶವಾದ ಬದುಕು-ಬದುಕಲು ಬಿಡು, ಮತ್ತು ಜೀವಿಗೆ ಜೀವಿಯೇ ನೆರವು ಎಂಬ ತತ್ವ ಸಿದ್ಧಾಂತವನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಬದುಕುತ್ತಿರುವವರು ಜೈನ ಧರ್ಮಮದ ಅನುಯಾಯಿಗಳು, ಅದರಲ್ಲಿಯೂ ಧರ್ಮಪ್ರವರ್ತಕರಾಗಿ ಆಧ್ಯಾತ್ಮ, ಪ್ರವರ್ತಕರಾಗಿ, ಶಾಂತಿ ಪ್ರಿಯರಾಗಿ ಅಹಿಂಸೆಯನ್ನು ಪ್ರತಿಪಾದನೆ ಮಾಡುವಂತಹ ಜೈನ ಮುನಿಗಳಿಗೆ ಆಗಿರುವ ಈ ಅಹಿತಕರ ಘಟನೆಗೆ ಸರ್ಕಾರ ಮತ್ತು ಸರ್ಕಾರಿ ಅಧಿಕಾರಿಗಳು ಕಾನೂನಾತ್ಮಕವಾಗಿ ಅತ್ಯಂತ ಕಠಿಣವಾದ ಸೂಕ್ತದಂಡನೆಯನ್ನುನೀಡುವುದರೊಂದಿಗೆ ಮುಂಬರುವ ದಿನಗಳಲ್ಲಿ ಅಲ್ಪಸಂಖ್ಯಾತರಲ್ಲಿ ಅಲ್ಪಸಂಖ್ಯಾತರಾದಂತಹ ಜೈನ ಧರ್ಮ ಸಾಧು ಸಂತರಿಗೆ ಇಂತಹ ಈ ಭೂಮಿಯ ಮೇಲೆ ಈ ಮನುಕುಲ ಬಂದಾಗಿನಿಂದ ಎಂದೂಕೇಳರಿಯದಘನಘೋರಕಠೋರ ಮೃಗಗಳಿಗಿಂತಲೂ ಕೀಳಾಗಿ ವರ್ತಿಸಿದ ಆ ಕೊಲೆ ಕಟುಕರು ತಮ್ಮ ಕ್ರೌರ್ಯ ಮೆರೆದಿದ್ದಾರೆ. ಮುಂದಿನ ಭವಿಷ್ಯದಲ್ಲಿ ಇಂತಹ ಯೋಜನೆ ಕನಸಿನಲ್ಲಿಯೂ ಬರಬಾರದು ಅಂತಹ ಕಠೋರ ಶಿಕ್ಷೆಗೆ ಅವರನ್ನು ಗುರಿಪಡಿಸಬೇಕು ಮತ್ತು ಎಂದೂ ಇಂತಹ ಹಿಂಸಾತ್ಮಕ ಘಟನೆಗಳು ನಡೆಯದಂತೆ ಸೂಕ್ತ ಮುಂಜಾಗ್ರತಾ ಕ್ರಮವನ್ನು ಕೈಗೊಂಡು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವುದರೊಂದಿಗೆ ಸಕಲ ಜೈನ ಸಮಾಜಕ್ಕೆ ನ್ಯಾಯ ಮತ್ತು ರಕ್ಷಣೆ ಒದಗಿಸಿಕೊಡಿರೆಂದು ಸರ್ಕಾರಕ್ಕೆ ಒತ್ತಾಯಿಸಲಾಯಿತು. ಈ ಸಂದರ್ಭದಲ್ಲಿ ಜೈನ ಸಮುದಾಯದ ಮುಖಂಡ ರಾದ ಅಜಿತ್ ಜ್ಯನ್,ಪ್ರೇಮಚಂದ್,ಆಶೋಕ್ ಜ್ಯನ್, ರಜಿತ್ ಜ್ಯನ್,ವಿಕ್ರಾಂತ್ ಜ್ಯನ್, ಶ್ರೇಣಿಕ್ ಜ್ಯನ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಎಚ್‌ಟಿಟಿ ಸರ್ಕಾರಿ ಬಾಲಕಿಯ ಶಾಲೆಯಲ್ಲಿ ಮಲೇರಿಯಾ ನಿಯಂತ್ರಣ ಜಾಗೃತಿ ಕಾರ್ಯಕ್ರಮ



» **ಚಳ್ಳಕೆರೆ**

ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆ ಹಾಗೂ ಇನ್ನಿತರೆ ಕಾರಣದಿಂದ ರೋಗಗಳು ಎಲ್ಲೆಡೆ ವ್ಯಾಪಿಸಿರುತ್ತವೆ. ಆರೋಗ್ಯ ಇಲಾಖೆ ಜಾಗೃತಿ ಕಾರ್ಯಕ್ರಮಗಳ ನಡುವೆಯೂ ಸಹ ಕೆಲವೊಮ್ಮೆ ರೋಗಗಳು ಉಲ್ಬಣಗೊಳ್ಳುತ್ತವೆ. ಈ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಶಾಲಾ, ಕಾಲೇಜುಗಳಲ್ಲೂ ಸಹ ಜಾಗೃತಿ ಕಾರ್ಯಕ್ರಮಗಳ ಆರೋಗ್ಯ ರಕ್ಷಣೆಗೆ ಮುಂದಾಗಿದೆ ಎಂದು ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಉದಯ ತಿಳಿಸಿದರು. ಅವರು, ಬುಧವಾರ ನಗರದ ಹೆಗ್ಗೆರೆ ತಾಯಮ್ಮ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ವಿಶ್ವ ಮಲೇರಿಯಾ ನಿಯಂತ್ರಣ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಅನಾಪೀಲ್ ಎಂಬ ಭಯಾನಕ ಸೊಳ್ಳೆಯಿಂದ ಈ ರೋಗ ವ್ಯಾಪಿಸುತ್ತದೆ. ವಿಶೇಷವಾಗಿ ಮಕ್ಕಳು ಹಾಗೂ ವಯೋವೃದ್ಧರು ಮಲೇರಿಯಾಕ್ಕೆ ಬೇಗನೆ ತುತ್ತಾಗುತ್ತಾರೆ. ಆದ್ದರಿಂದ ವಿದ್ಯಾರ್ಥಿಗಳು ನಿಮ್ಮ ಗ್ರಾಮಗಳಲ್ಲಿ ಸ್ನೇಹಿತರು, ಹಿತೈಷಿಗಳು ಹಾಗೂ ಬಂಧುಗಳಿಗೆ ಈ ರೋಗದ ಬಗ್ಗೆ ತಿಳಿಸಿ ಜಾಗೃತಿ ಮೂಡಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಭಾರ ಮುಖ್ಯ ಶಿಕ್ಷಕಿ ವೇಣಿ ಮಾತನಾಡಿ, ವಿದ್ಯಾರ್ಥಿಗಳು ಕೇವಲ ಕಲಿಕೆಗಷ್ಟೇ ಸೀಮಿತವಾಗದೆ ಇಂತಹ ದೊಡ್ಡ ಪ್ರಮಾಣದ ಸಾಂಕ್ರಾಮಿಕ ರೋಗಗಳನ್ನು ಸಹ ನಿಯಂತ್ರಿಸುವಲ್ಲಿ ಆರೋಗ್ಯ ಇಲಾಖೆಯೊಂದಿಗೆ ಸಹಕಾರನೀಡಬೇಕಿದೆ.ಪ್ರತಿಯೊಬ್ಬವಿದ್ಯಾರ್ಥಿಯೂ ಹತ್ತು ಜನರಿಗೆ ಜಾಗೃತಿ ಮೂಡಿಸಿದರೆ ಮಾತ್ರ ಈ ಕಾರ್ಯಕ್ರಮ ಸಾರ್ಥಕವೆನ್ನಿಸುತ್ತದೆ. ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿ ಸಾಧಿಸಬೇಕಾದಲ್ಲಿ ಸದೃಢ ಆರೋಗ್ಯವೂ ಸಹ ಬಹುಮುಖ್ಯವೆಂದರು. ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ಟಿ.ತಿಪ್ಪೇಸ್ವಾಮಿ, ಮೇಲ್ವಿಚಾರಕ ಟಿ.ಎನ್.ಲೋಕೇಶ್, ಬಿ.ಎಚ್.ರಾಜು, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಎಂ.ಜಿ.ಅನಿತಾ, ಆಶಾ ಕಾರ್ಯಕರ್ತೆ ಅನುಸೂಯ, ಶಿಕ್ಷಕರಾದ ಪ್ರವೀಪ್,, ಬಿ.ರಾಜಕುಮಾರ್, ಪ್ರಾಣೇಶ್, ಬಿ.ಎಲ್.ಉಮಾ, ಪ್ರಕಾಶ್, ಶಿವಣ್ಣ, ಪೂರ್ಣಿಮಾ, ಜಮುನಾ, ಕುಸುಮಾ, ಸುಜಾತ, ನಾಗರಾಜು, ಪ್ರಸನ್ನಕುಮಾರ್, ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

### ಗ್ರಾಮೀಣ ಸಾಹಿತ್ಯ ಪರಿಷತ್ ಕಾರ್ಯಕ್ರಮ ಉದ್ಘಾಟಿಸಿದ ಕೋಡಪ್ಪ



» **ಚಳ್ಳಕೆರೆ**

ವಾಲ್ಮೀಕಿ ರಾಮಾಯಣದಲ್ಲಿ ಗ್ರಾಮೀಣ ಜನಜೀವನದ ಸಂಬಂಧ ಮತ್ತು ಸಂಸ್ಕೃತಿಯ ಬಗ್ಗೆ ಸಾರ್ವತ್ರಿಕ ಸತ್ಯ ಸಂಗತಿಗಳಿವೆ ಎಂದು ಸಾಹಿತಿ ತಿಪ್ಪಣ್ಣ ಮರಿಕುಂಟೆ ಹೇಳಿದರು.ತಾಲೂಕಿನ ದೇವರಮರಿಕುಂಟೆಗ್ರಾಮದಲ್ಲಿಬುಧವಾರಗ್ರಾಮೀಣ ಸಾಹಿತ್ಯ ಪರಿಷತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮಾತನಾಡಿದರು.ಬದಲಾಗುತ್ತಿರುವ ಸಮಾಜದಲ್ಲಿ ಕುಟುಂಬ ಸಂಬಂಧಗಳು ಮರೆಯಾಗುತ್ತಿವೆ. ರಾಮಾಯಣ ಮಹಾಭಾರತ ಮಹಾ ಕಾವ್ಯಗಳ ಆದರ್ಶವನ್ನು ಸಮಾಜದಲ್ಲಿ ಉಳಿಸಿಕೊಳ್ಳಬೇಕಿದೆ. ಕಲಾ ಚಟುವಟಿಕೆಗಳು ಮತ್ತು ಕುಟುಂಬ ಪ್ರೀತಿ ಸಂಬಂಧಗಳು ಹಳ್ಳಿಗಳಲ್ಲಿ ಮಾತ್ರ ಜೀವಂತವಾಗಿವೆ. ಇಲ್ಲಿನ ಪ್ರತಿಭಾವಂತ ಕಲಾವಿದರು ಮತ್ತು ಕೃಷಿಕ ವರ್ಗವನ್ನು ಗುರುತಿಸಿ ಪ್ರೋತ್ಸಾಹಿಸವ ಕೆಲಸ ಅಗತ್ಯವಿದೆ ಎಂದು ಹೇಳಿದರು.ಶಿಕ್ಷಕ ಕೋಡಪ್ಪ ಮಾತನಾಡಿ, ಹಳ್ಳಿಗರ ಜನಜೀವನ ಸುಧಾರಣೆ ಆಗಬೇಕಿದೆ. ಶಿಕ್ಷಣ ಜಾಗೃತಿಯಲ್ಲಿ ಬದುಕಿನ ಭದ್ರತೆ ಕಂಡುಕೊಳ್ಳಬೇಕು. ಸಮಾಜವನ್ನು ಪರಿಪೂರ್ಣ ಅರ್ಥೈಸಿಕೊಳ್ಳಲು ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಯ ಚಟುವಟಿಕೆಗಳಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಮನವಿ ಮಾಡಿದರು.ಕಾರ್ಯಕ್ರಮದಲ್ಲಿ ಸಮಾಜ ಸೇವಕ ಬಿ.ಜಿ. ವೆಂಕಟೇಶ್, ಪ್ರಗತಿಪರ ರೈತ ಡಾ.ಆರ್.ಎ. ದಯಾನಂದಮೂರ್ತಿ ಅವರನ್ನು ಅಭಿನಂದಿಸಲಾಯಿತು. ನಿವೃತ್ತ ನೌಕರ ಎಂ.ಒ. ಓಬಣ್ಣ, ಗ್ರಾಪಂ ಮಾಜಿ ಸದಸ್ಯ ಪೂಜಾರಿ ಗೋವಿಂದಪ್ಪ, ವಿನೋದಮ್ಮ, ಎ.ವಿ. ಮಹೇಶ, ಮಂಜುನಾಥ, ಹನುಮಂತಪ್ಪ ಮತ್ತಿತರರು ಇದ್ದರು. ಚಳ್ಳಕೆರೆ ತಾಲೂಕಿನ ದೇವರಮರಿಕುಂಟೆ ಗ್ರಾಮದಲ್ಲಿ ಬುಧವಾರ ಗ್ರಾಮೀಣ ಸಾಹಿತ್ಯ ಪರಿಷತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಶಿಕ್ಷಕ ಕೋಡಪ್ಪ ಉದ್ಘಾಟಿಸಿದರು.

## ಜಿಲ್ಲೆಯ 2.79 ಲಕ್ಷ ಪಡಿತರ ಚೀಟಿದಾರರಿಗೆ ರೂ.16.23 ಕೋಟಿ ಹಣ ಜಮಾ

# ಅನ್ನಭಾಗ್ಯ ಯೋಜನೆ: ನೇರ ನಗದು ವರ್ಗಾವಣೆ

■ **ಚಿತ್ರದುರ್ಗ**

ಜಿಲ್ಲೆಯಲ್ಲಿ ಒಟ್ಟು 4,02,618 ಪಡಿತರ ಚೀಟಿಗಳಿದ್ದು, ಆ ಪೈಕಿ ಸಕ್ರಿಯವಾಗಿರುವ, ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಿರುವ ಒಟ್ಟು 2,79,836 ಪಡಿತರ ಚೀಟಿದಾರರಿಗೆ ರೂ.16.23 ಕೋಟಿ ಹಣವನ್ನು ಡಿಬಿಟಿ ಮುಖಾಂತರ ಅನ್ನಭಾಗ್ಯ ಯೋಜನೆಯಡಿ ಅರ್ಹ ಪಡಿತರ ಕುಟುಂಬಗಳಿಗೆ ನಗದು ವರ್ಗಾವಣೆಯನ್ನು ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ತಿಳಿಸಿದ್ದಾರೆ.

ಸರ್ಕಾರದ ಆದೇಶದಂತೆ ಆದ್ಯತಾ ಮತ್ತು ಅಂತ್ಯೋದಯ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 5 ಕೆ.ಜಿ ಅಕ್ಕಿ ವಿತರಿಸಲು ಉದ್ದೇಶಿಸಲಾಗಿದ್ದು, 5 ಕೆ.ಜಿ ಅಕ್ಕಿಯ ಬದಲಾಗಿ ಪಡಿತರ ಚೀಟಿ ಕುಟುಂಬದಲ್ಲಿನ ಪ್ರತಿ ಫಲಾನುಭವಿಗೆ ಪ್ರತಿ ಕೆ.ಜಿ ಗೆ ರೂ.34 ರಂತೆ ಪ್ರತಿ ಸದಸ್ಯರಿಗೆ ರೂ.170 ರಂತೆ ಪಡಿತರ ಕುಟುಂಬದ ಮುಖ್ಯಸ್ಥರ ಖಾತೆಗೆ ನಗದು ವರ್ಗಾವಣೆ ಮಾಡಲಾಗಿದೆ.

ಅಂತ್ಯೋದಯ ಅನ್ನಯೋಜನೆಯ ಪಡಿತರ ಚೀಟಿ ಹೊಂದಿರುವ ಕುಟುಂಬದಲ್ಲಿ 3 ಅಥವಾ 3ಕ್ಕಿಂತ ಕಡಿಮೆ ಸದಸ್ಯರಿರುವ ಕುಟುಂಬವು ಈಗಾಗಲೇ ಪ್ರತಿ ತಿಂಗಳು 35 ಕೆ.ಜಿ ಆಹಾರಧಾನ್ಯ ಪಡೆಯುತ್ತಿರುವುದರಿಂದ ಅಂತಹ ಕುಟುಂಬಗಳಿಗೆ ನಗದು ಸೌಲಭ್ಯ ನೀಡಲಾಗುವುದಿಲ್ಲ. ಆದರೆ ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಯ ಕುಟುಂಬದಲ್ಲಿ 4 ಸದಸ್ಯರಿದ್ದರೆ ಈ ಕುಟುಂಬವು ರೂ.170 ಗಳನ್ನು, 5 ಸದಸ್ಯರನ್ನು ಹೊಂದಿರುವ ಕುಟುಂಬವು ರೂ.510 ಗಳನ್ನು, 6 ಸದಸ್ಯರನ್ನು ಹೊಂದಿರುವ ಕುಟುಂಬವು ರೂ.850 ಗಳನ್ನು ಪಡೆಯುತ್ತದೆ. ಹೆಚ್ಚಿನ ಸದಸ್ಯರಿದ್ದಲ್ಲಿ ಇದೇ ಅನುಪಾತವು ಮುಂದುವರೆಯುತ್ತದೆ.



ಕಳೆದ ಮೂರು ತಿಂಗಳಲ್ಲಿ ಪಡಿತರ ಆಹಾರಧಾನ್ಯವನ್ನು ಪಡೆದುಕೊಂಡಿರುವ ಕುಟುಂಬಗಳು ನಗದು ವರ್ಗಾವಣೆ ಸೌಲಭ್ಯವನ್ನುಪಡೆಯಲು ಅರ್ಹರಿರುತ್ತಾರೆ. ಪಡಿತರ ಚೀಟಿಯಲ್ಲಿ ಕುಟುಂಬದ ಮುಖ್ಯಸ್ಥರನ್ನು ಹೊಂದಿರದ ಅಥವಾ 1ಕ್ಕಿಂತ ಹೆಚ್ಚು ಮುಖ್ಯಸ್ಥರನ್ನು ಹೊಂದಿರುವ ಪಡಿತರ ಚೀಟಿ ಕುಟುಂಬಗಳನ್ನು ನಗದು ವರ್ಗಾವಣೆ ಸೌಲಭ್ಯದಿಂದ ಹೊರಗಿಡಲಾಗಿದೆ.

ಕುಟುಂಬದ ಮುಖ್ಯಸ್ಥರನ್ನು ಗುರುತಿಸಿರುವ, ಆಧಾರ್ ಜೋಡಣೆ ಮಾಡಿರುವ ಮತ್ತು ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆಯನ್ನು ಹೊಂದಿರುವ ಅಂತ್ಯೋದಯ ಅನ್ನಯೋಜನೆ ಮತ್ತು ಆದ್ಯತಾ ಪಡಿತರ ಚೀಟಿ ಕುಟುಂಬಗಳು ನಗದು ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

ಜಿಲ್ಲೆಯಲ್ಲಿ ಒಟ್ಟು 41,888 ಪಡಿತರ ಚೀಟಿಗಳಲ್ಲಿ ಕೆಲವು ಕುಟುಂಬದ ಮುಖ್ಯಸ್ಥರು ಸಕ್ರಿಯ ಬ್ಯಾಂಕ್ ಖಾತೆಯನ್ನು ಹೊಂದಿರುವುದಿಲ್ಲ. ಕೆಲವರು ಬ್ಯಾಂಕ್ ಖಾತೆಯೊಂದಿಗೆ ಆಧಾರ್ ಜೋಡಣೆ ಮಾಡಿರುವುದಿಲ್ಲ. ಇನ್ನೂ ಕೆಲವರು ಬ್ಯಾಂಕ್ ಖಾತೆಯನ್ನು ತೆರೆದಿರುವುದಿಲ್ಲ. ಈ ಮಾಹಿತಿಯನ್ನುಸಂಬಂಧಪಟ್ಟನ್ಯಾಯಬೆಲೆ ಅಂಗಡಿಗಳಲ್ಲಿ ಪ್ರಚುರ ಪಡಿಸಲಾಗಿದೆ. ಈ ರೀತಿ ಡಿಬಿಟಿಯಿಂದ ಜುಲೈ-2023ರ ಮಾಹೆಗೆ ವಂಚಿತರಾಗಿರುವ ಪಡಿತರ ಚೀಟಿದಾರರು ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆಯ ಮಾಹಿತಿಯನ್ನು ಆಧಾರ್ ಸಂಖ್ಯೆಯೊಂದಿಗೆ ಜೋಡಣೆ ಮಾಡಿದ ನಂತರ ನಿಷ್ಕ್ರೀಯ ಬ್ಯಾಂಕ್ ಖಾತೆಯನ್ನು ಪುನರ್ಜೀವಗೊಳಿಸಿದ ನಂತರ ಹಾಗೂ ಇದುವರೆಗೂ ಕುಟುಂಬದ ಮುಖ್ಯಸ್ಥರು ಸಕ್ರಿಯ ಬ್ಯಾಂಕ್ ಖಾತೆ ಹೊಂದಿಲ್ಲದಿದ್ದರೆ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಖಾತೆಯನ್ನು ತೆರೆದರೆ ಮುಂದಿನ ಮಾಹೆಯ ಡಿಬಿಟಿಗೆ ಅರ್ಹರಾಗಿರುತ್ತಾರೆ. ಈ ಕಾರ್ಯವನ್ನು ಇದೇ ಜುಲೈ 20ರ ಒಳಗಾಗಿ ಮುಕ್ತಗೊಳಿಸಲು ಸೂಚಿಸಿದೆ.

ಹಣ ವರ್ಗಾವಣೆಯಾದ ಬಗ್ಗೆ ಹಾಗೂ ಇತರೆ ವಿವರಗಳನ್ನು http://ahara.kar.nic.in/status2/status_of_dbt.aspx ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ತಮ್ಮ ವ್ಯಾಪ್ತಿಯಲ್ಲಿ ಬರುವ ನ್ಯಾಯಬೆಲೆ ಅಂಗಡಿಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯಾದ್ಯಂತ ಚಲನಚಿತ್ರ ಮಂದಿರಗಳಲ್ಲಿ ಏಕರೂಪ ಪ್ರವೇಶ ನಿಗದಿಗೆ ಸಿಎಂಗೆ ಮನವಿ

» **ಬೆಂಗಳೂರು**

ರಾಜ್ಯಾದ್ಯಂತ ಚಲನಚಿತ್ರ ಮಂದಿರಗಳಲ್ಲಿ ಏಕರೂಪದ ಪ್ರವೇಶ ದರ ನಿಗಧಿ ಮಾಡುವುದು ಸೇರಿದಂತೆ ನಾಲ್ಕು ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಚಲನಚಿತ್ರ ವಾಣಿಜ್ಯ ಮಂಡಳಿಯ ನಿಯೋಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಇಂದಿಲ್ಲಿ ಮನವಿ ಮಾಡಿದೆ.

ನೆರೆ ರಾಜ್ಯಗಳಲ್ಲಿ ನಿಗಧಿ ಪಡಿಸಿರುವಂತೆ ರಾಜ್ಯದಲ್ಲಿಯೂ ಮಲ್ಟಿಪ್ಲೆಕ್ಸ್ ಚಿತ್ರಮಂದಿರದಲ್ಲಿ 250 ರೂಪಾಯಿ ದರ ಮೀರದಂತೆ ಹಾಗು ಏಕಪರದೆಯ ಚಿತ್ರಮಂದಿರದಲ್ಲಿ 150 ರೂಪಾಯಿ ಮೀರದಂತೆ ಟಿಕೆಟ್ ದರ ನಿಗಧಿ ಮಾಡಿ ಆದೇಶ ಹೊರಡಿಸುವಂತೆ ಮಂಡಳಿಯ ಅಧ್ಯಕ್ಷ ಭಾ.ಮ ಹರೀಶ್ ನೇತೃತ್ವದ ನಿಯೋಗ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದೆ.

ನಿಯೋಗದಲ್ಲಿ ಮಂಡಳಿಯ ಗೌರವ ಕಾರ್ಯದರ್ಶಿಗಳಾದ ಸುಂದರ್ ರಾಜು, ಉಪಾಧ್ಯಕ್ಷ ಎಚ್, ಸಿ ಶ್ರೀನಿವಾಸ್, ಕಾರ್ಯದರ್ಶಿ ಎಲ್.ಸಿ ಕುಶಾಲ್ ,ಹಿರಿಯ ಕಲಾವಿದೆ ಪ್ರಮೀಳಾ ಜೋಷಾಯ್ ಸೇರಿದಂತೆ ಇನ್ನಿತರೆ ಪಧಾಧಿಕಾರಿಗಳ ನಿಯೋಗ ರಾಜ್ಯ ಸರ್ಕಾರಕ್ಕೆ ಕನ್ನಡ ಚಿತ್ರರಂಗದ ಬೆಳವಳಿಗೆಗೆ ಪೂರಕ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದೆ.



ಚಲನಚಿತ್ರ ಅಕಾಡಮಿ ಹಾಗು ಚಲನಚಿತ್ರ ವಾಣಿಜ್ಯ ಮಂಡಳಿ ಸಹಯೋಗದಲ್ಲಿ ಅಂದಾಜು 20 ಕೋಟಿ ರೂಪಾಯಿ ವೆಚ್ಚದಲ್ಲಿ ಡಿಜಿಟಲ್ ಡಿಸಿಪಿಯಂತ್ರೋಪಕರಣ ಸ್ಥಾಪಿಸಲು ಆಯವ್ಯಯದಲ್ಲಿ ಹಣ ನಿಗಧಿ ಮಾಡಬೇಡಿ ಕೊಡಿ, ಇದರಿಂದ ಸರ್ಕಾರದ ಬೊಕ್ಕಸಕ್ಕೆ ಹೆಚ್ಚಿನ ರೂಪದಲ್ಲಿ ತೆರಿಗೆ ಬರಲು ಸಹಕಾರಿಯಾಗಲಿದೆ ಎಂದು ಭಾ. ಮ ಹರೀಶ್ ನೇತೃತ್ವದ ನಿಯೋಗ ಮನವಿಯಲ್ಲಿ ತಿಳಿಸಿದೆ.

ರಾಜ್ಯದ ಚಿತ್ರಮಂದಿರಗಳಲ್ಲಿ ಪ್ರೊಜೆಕ್ಟರ್ ವಿದೇಶದಿಂದ ತರಿಸಬೇಕಾಗಿದೆ.

ಅದರಲ್ಲಿಯೂ ಒಬ್ಬರು ಇಬ್ಬರು ಸೇವಾ ಪೂರೈಕೆದಾರರು ಅಗತ್ಯವಿದೆ. ಈ ಕ್ರಮದಿಂದ ಚಿತ್ರಮಂದಿರಗಳು ಬಾಡಿಗೆ ರೂಪದಲ್ಲಿ ಪಡೆದು ಪ್ರದರ್ಶನ ಮಾಡುತ್ತಿವೆ.

ಹೀಗಾಗಿ ಸ್ವಂತ ಪ್ರೊಜೆಕ್ಟರ್ ಖರೀದಿಗೆ 40 ರಿಂದ 50 ಲಕ್ಷ ಖರ್ಚಾಗಲಿದ್ದು ಇದಕ್ಕಾಗಿ 10 ರಿಂದ 15 ಲಕ್ಷ ಸಹಾಯಧನ ನೀಡಲು ಇದಕ್ಕಾಗಿ ಪ್ರಾರಂಭಿಕ ಹಂತದಲ್ಲಿ 20 ಕೋಟಿ ಹಣ ನಿಗಧಿ ಪಡಿಸಿ ಎಂದು ಮನವಿ ಪತ್ರದಲ್ಲಿ ತಿಳಿಸಿದೆ.

ಚಲಚಿತ್ರೋದ್ಯೋಮವನ್ನು ಉದ್ಯಮ ಎಂದು ಪರಿಗಣಿಸಿ ಪೂರಕ ಕ್ರಮ ಕೈಗೊಳ್ಳಬೇಕು ಎನ್ನುವುದು ಸೇರಿದಂತೆ ವಿವಿಧ ಬೇಡಿಕೆಗಳನನು ಇಡೇರಿಸಿ ಚಿತ್ರರಂಗದ ಬೆಳವಣಿಗೆಗೆ ಸಹಕಾರ ನೀಡಿ ಎಂದು ಭಾ.ಮ ಹರೀಶ್ ಮತ್ತವರ ತಂಡ ಮನವಿ ಮಾಡಿದೆ.

## ವಾರದಲ್ಲಿ ರೈತರ ಖಾತೆಗೆ ಹಣ ಜಮಾ: ಶಾಸಕ ಬಿ.ಜಿ.ಗೋವಿಂದಪ್ಪ



» **ಹೊಸದುರ್ಗ**

ಬೆಂಬಲ ಬೆಲೆ ಯೋಜನೆಯಡಿ ಖರೀದಿಯಾಗಿರುವ ರಾಗಿ ಹಣವನ್ನು ಒಂದು ವಾರದೊಳಗೆ ರೈತರ ಖಾತೆಗೆ ಜಮಾ ಮಾಡಲಾಗುವುದು. ಈ ಬಗ್ಗೆ ರೈತರು ಆತಂಕಪಡುವಂತಿಲ್ಲ ಎಂದು ಶಾಸಕ ಬಿ ಜಿ ಗೋವಿಂದಪ್ಪ ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದರು. ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮದ ವ್ಯವಸ್ಥಾಪಕ (ಎಂ.ಡಿ ) ಜ್ಞಾನೇಂದ್ರ ಕುಮಾರ್ ಅವರೊಂದಿಗೆ ತಾಲ್ಲೂಕಿನ ರೈತರ ಸಮ್ಮುಖದಲ್ಲಿ ಭೇಟಿಯಾಗಿ ಚರ್ಚಿಸಿದರ ಪರಿಣಾಮ ▯ 53 ಕೋಟಿ ಹಣ ಬಿಡುಗಡೆಯಾಗಿದೆ. ಇನ್ನೂ ಒಂದು ವಾರದಲ್ಲಿ ರಾಗಿ ನೀಡಿರುವ ಒಟ್ಟು 5316 ರೈತರ ಖಾತೆಗೆ ಹಣ ಜಮಾ ಆಗಲಿದೆ. ಗ್ರೀನ್ ವೋಚರ್ ಪಡೆಯದೆ ಇರುವವರು 450 ಜನ ರೈತರಿದ್ದು, ಅದನ್ನು ಪರಿಶೀಲನೆ ನಡೆಸಲಾಗುವುದು. ರಾಗಿ ಖರೀದಿಯಲ್ಲಿ ನಡೆದಿರುವ ಅಕ್ರಮದ ಬಗ್ಗೆಯೂ ಸಹ ಸೂಕ್ತ ಕ್ರಮ ಕೈಗೊಂಡು. ಎಲ್ಲಾ ರೈತರಿಗೂ ಹಣ ಒದಗಿಸಲಾಗುವುದು. ಈ ಬಗ್ಗೆ ಯಾವುದೇ ಗೊಂದಲಗಳಿಲ್ಲದೆ ರೈತರು ಹಣ ಪಡೆಯಬಹುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಜೈನಮುನಿ ಹತ್ಯೆಕೋರರನ್ನು ಗಲ್ಲುಶಿಕ್ಷೆಗೊಳಪಡಿಸುವಂತೆ ವಿಜಯಸೇನೆಯಿಂದ ಜಿಲ್ಲಾಡಳಿತದ ಮೂಲಕ ಮನವಿ

» **ಚಿತ್ರದುರ್ಗ**

ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲ್ಲೂಕು ಹಿರೇಕೋಡಿ ಗ್ರಾಮದಲ್ಲಿರುವ ನಂದಿ ಪರ್ವತ ಆಶ್ರಮದ ಜೈನಮುನಿಯನ್ನು ನಿಕೃಷ್ಟವಾಗಿ ಹತ್ಯೆಗೈದಿರುವುದನ್ನು ವಿರೋಧಿಸಿ ಕರುನಾಡ ವಿಜಯಸೇನೆ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಪ್ರತಿಭಟನೆ ನಡೆಸಿ ಪತ್ರಾಂಕಿತ ಸಹಾಯಕರ ಮೂಲಕ ರಾಜ್ಯದ ಮುಖ್ಯಮಂತ್ರಿ ಹಾಗೂ ಗೃಹಸಚಿವರಿಗೆ ಮನವಿ ಸಲ್ಲಿಸಿದರು. ಜೈನಮುನಿಯನ್ನು ಹತ್ಯೆಗೈದು ದೇಹವನ್ನು ಒಂಬತ್ತು ಭಾಗಗಳನ್ನಾಗಿ ತುಂಡರಿಸಿ ಬಟ್ಟೆಯಲ್ಲಿ ಸುತ್ತಿ ಕೊಳವೆಬಾವಿಯಲ್ಲಿ ಎಸೆದಿರುವುದು ಅಮಾನವೀಯ ಘಟನೆ. ಇಂತಹ



ನೀಚ ಕೃತ್ಯವೆಸಗಿರುವ ಕಟುಕರನ್ನು ಕೂಡಲೆ ಗಲ್ಲು ಶಿಕ್ಷೆಗೊಳಪಡಿಸಿ ಸರ್ವಧರ್ಮದ ಗುರುಗಳಿಗೆ, ಮಠಾಧೀಶರುಗಳಿಗೆ ಅಂಗರಕ್ಷಕರನ್ನು ನೇಮಿಸಿ ಸೂಕ್ತ ಭದ್ರತೆ ಕೊಡಬೇಕೆಂದು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.

## ಇನ್ನರ್‌ವೀಲ್ ಕ್ಲಬ್‌ನಿಂದ ಬಡ ಮಹಿಳೆಗೆ ಹೊಲಿಗೆ ಯಂತ್ರ ವಿತರಣೆ




» **ಚಿತ್ರದುರ್ಗ**

ಇನ್ನರ್‌ವೀಲ್ ಕ್ಲಬ್ ಚಿತ್ರದುರ್ಗ ಅಧ್ಯಕ್ಷೆಯಾಗಿ ಶ್ರೀಮತಿ ಮೋಕ್ಷರುದ್ರಸ್ವಾಮಿ ಪದಗ್ರಹಣ ಸ್ವೀಕರಿಸಿದ ದಿನದಂದೆ ಬಡ ಮಹಿಳೆಗೆ ಉಚಿತವಾಗಿ ಹೊಲಿಗೆ ಯಂತ್ರವನ್ನು ವಿತರಿಸಿದರು. ಇನ್ನರ್‌ವೀಲ್ ಕ್ಲಬ್ ಕಾರ್ಯದರ್ಶಿ ರೇಷ್ಮಖಾನಂ, ವೀಣಸ್ವಾಮಿ, ಜ್ಯೋತಿ ಲಕ್ಷ್ಮಣ್ ಚಿತ್ರದಲ್ಲಿದ್ದಾರೆ.

**ಪ್ರಮುಖ ಸುದ್ದಿ**

# ಫಸಲ್ ಭೀಮಾ ಯೋಜನೆ ವಿಮೆ ಹಣ ಬಿಡುಗಡೆಯಲ್ಲಿ ತಾರತಮ್ಯ ಕೃಷಿ ಅಧಿಕಾರಿಗಳೇ ಶಾಮೀಲು ಆರೋಪ!?

» **ಚಿತ್ರದುರ್ಗ**

ದೇಶದ ರೈತರಿಗೆ ಅನುಕೂಲ ಆಗುವ ದೃಷ್ಟಿಯಿಂದನಮ್ಮಹೆಮ್ಮೆಯಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ತಮ್ಮ ಕನಸಿನ ಯೋಜನೆಯಾದ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ರೈತರಿಗೆ ಬೆಳೆ ವಿಮೆ ವಿತರಣೆ ಮಾಡುತ್ತಿದ್ದಾರೆ.

ಆದರೆ ಈ ಕಾರ್ಯಕ್ರಮ ಕೆಲ ಊರಿನಲ್ಲಿ ರೈತರಿಗೆ ತಲುಪಬೇಕಾದ ಬೆಳೆ ವಿಮೆ ಹಣವೇ ತಲುಪುತ್ತಿಲ್ಲ ಎಂದು ತಮ್ಮ ಆಕ್ರೋಶವನ್ನು ರೈತರು ಹೊರ ಹಾಕುತ್ತಿದ್ದಾರೆ.

ಇಂತಹ ನಿದರ್ಶನ ಎಂಬಂತೆ ಮೊದಲೇ ಬರದನಾಡು ಎಂಬ ಹಣೆಪಟ್ಟಿ ಪಡೆದಿರುವ ಚಿತ್ರದುರ್ಗ ಜಿಲ್ಲೆಯ ರೈತರು ಸೇರ್ಪಡೆ ಆಗಿದ್ದಾರೆ.

ಚಳ್ಳಕೆರೆ ತಾಲೂಕಿನ ಓ.ಮಹದೇವಪುರ ಗ್ರಾಮದ ರೈತರು ತಮ್ಮ ಬೆಳೆ ವಿಮೆ ಇನ್ಸೂರೆನ್ಸ್ ಕಂಪನಿಗೆ ಪ್ರತಿ ವರ್ಷ ತಪ್ಪದೇ ಕಟ್ಟುತ್ತಿದ್ದರು ಅವರಿಗೆ ಬೆಳೆ ವಿಮೆ ಮಾತ್ರ ಸಿಕ್ಕಿಲ್ಲ. ಇಡೀ ಗ್ರಾಮದಲ್ಲಿ ಸುಮಾರು 1000ಕ್ಕೂ ಅಧಿಕ ಮಂದಿ ರೈತರು ಬೆಳೆ ವಿಮೆ ಇನ್ಸೂರೆನ್ಸ್ ಪಾವತಿ ಮಾಡುತ್ತಿದ್ದಾರೆ. ಇನ್ಸೂರೆನ್ಸ್ ಪಾವತಿ ಮಾಡುವುದು ತಡವಾದಲ್ಲಿ ಅಧಿಕಾರಿಗಳು ರೈತರಿಗೆ ಹಿಗ್ಗಾಮುಗ್ಗಾ ತರಾಟೆ ತೆಗೆದುಕೊಳ್ತಾರೆ. ಅದೇ ಅಧಿಕಾರಿಗಳು ರೈತರಿಗೆ ಸಮಸ್ಯೆ ಆದಾಗ ಅವರ ಕಷ್ಟಕ್ಕೆ ಬೇಗನೇ ಸ್ಪಂದಿಸಲ್ಲ ಏಕೆ ಎಂಬುದು ಓ.ಮಹದೇವಪುರ ಗ್ರಾಮದ ರೈತರ ಪ್ರಶ್ನೆಯಾಗಿದೆ.



ಆದರೆ ಕೆಲ ರೈತರಿಗೆ ಮಾತ್ರ ಬೆಳೆ ವಿಮೆ ಜಮಾ ಆಗಿರುವುದು ಇನ್ಸೂರೆನ್ಸ್ ಕಟ್ಟಿದ ಇನ್ನುಳಿದರೈತರಆಕ್ರೋಶಕ್ಕೆಕಾರಣವಾಗಿದೆ. ಇತ್ತ ಅಧಿಕಾರಿಗಳು ಸೂಕ್ತ ಮಾಹಿತಿ ಕೂಡ ನೀಡದೇ ಈ ರೀತಿ ಬೆಳೆ ವಿಮೆ ನೀಡುವಲ್ಲಿ ತಾರತಮ್ಯ ಮಾಡುತ್ತಿರುವುದು ಗ್ರಾಮಸ್ಥರು ಅಧಿಕಾರಿಗಳ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ. ಇದನ್ನೆಲ್ಲ ಮೆಲ್ನೋಟಕ್ಕೆ ಕಂಡ ರೈತರು ಅಧಿಕಾರಿಗಳೇ ಶಾಮೀಲಾಗಿ ನಿರ್ಲಕ್ಷ್ಯ ವಹಿಸಿರುವ ಕಾರಣ ನಮ್ಮಂತಹ ಕೆಲ ರೈತರಿಗೆ ಬೆಳೆ ವಿಮೆ ಸಿಗುತ್ತಿಲ್ಲ ಎಂದು ಕೃಷಿ ಅಧಿಕಾರಿಗಳ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. ಅಲ್ಲದೇ ಕೃಷಿ ಅಧಿಕಾರಿಗಳ ಕೆಲವರ ಮಧ್ಯೆ ಮಾಡಿಕೊಂಡಿರುವ ಒಳ ಒಪ್ಪಂದದಿಂದ ನಮ್ಮ ಗ್ರಾಮದ ಸುಮಾರು ರೈತರಿಗೆ ಅನ್ಯಾಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.ಹಾಗಾಗಿ ಈ ಕೂಡಲೇ ಬೆಳೆ ವಿಮೆ ತಾರತಮ್ಯಗೆ ಕಾರಣಗಳು ಏನು? ಕೃಷಿ ಅಧಿಕಾರಿಗಳ ನಡೆ ಏನು? ಎಂಬುದನ್ನೂ ಮಾನ್ಯ ಜಿಲ್ಲಾಧಿಕಾರಿಗಳೇ ಖುದ್ದು ತನಿಖೆ ನಡೆಸಿ ರೈತರಿಗೆ ಆಗಿರುವ ಅನ್ಯಾಯಕ್ಕೆ ನ್ಯಾಯ ಒದಗಿಸಬೇಕಿದೆ. ಈ ಪ್ರಕರಣ ಸಾಕಷ್ಟು ರೈತರ ಜೀವನಾಂಶಕ್ಕೆ ಕೃಷಿ ಯೋಗ್ಯವಾದುದಾಗಿದ್ದು, ಸಮಗ್ರ ತನಿಖೆ ನಡೆಸಿ ರೈತರಿಗೆ ಶೀಘ್ರವೇ ಬೆಳೆ ವಿಮೆ ವಿತರಿಸಿ ನಿರ್ಲಕ್ಷ್ಯ ತೋರಿದ ಹಾಗೂ ಒಳ ಒಪ್ಪಂದ ಮಾಡಿಕೊಂಡಿರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮಕೈಗೊಳ್ಳಿ ಎಂದು ಜಿಲ್ಲಾಧಿಕಾರಿಗಳಿಗೆ ಗ್ರಾಮಸ್ಥರು ಮನವಿ ಮಾಡಿಕೊಂಡರು.

ಫಾಸ್ಟ್ ನ್ಯೂಸ್

## ಮಕ್ಕಳ ಸಾಹಿತ್ಯ ವೇದಿಕೆಯಿಂದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ




» ಚಿತ್ರದುರ್ಗ

ಪ್ರತಿಯೊಂದು ಮಗುವಿನಲ್ಲಿಯೂ ಪ್ರತಿಭೆ ಅಡಗಿರುತ್ತದೆ. ಆದರೆ ಅದನ್ನು ಗುರುತಿಸಿ ಹೊರತೆಗೆಯುವ ಕೆಲಸವಾಗಬೇಕೆಂದು ಜಿಲ್ಲಾ ಮಕ್ಕಳ ಸಾಹಿತ್ಯ ವೇದಿಕೆ ಅಧ್ಯಕ್ಷೆ ರೂಪ ಜನಾರ್ಧನ್ ಹೇಳಿದರು. ಮೆದೇಹಳ್ಳಿಯಲ್ಲಿರುವ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಸಾಹಿತ್ಯ ವೇದಿಕೆ ವತಿಯಿಂದ ಇತ್ತೀಚೆಗೆ ಹಮ್ಮಿಕೊಳ್ಳಲಾಗಿದ್ದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಿ ಮಾತನಾಡಿದರು. ಮಕ್ಕಳಿಗೆ ಶಿಕ್ಷಣ ನೀಡುವುದರ ಜೊತೆಗೆ ಚಿಕ್ಕಂದಿನಿಂದಲೇ ಶಿಸ್ತು, ದೇಶಭಕ್ತಿಯನ್ನು ಮೈಗೂಡಿಸಿ ದೇಶಕ್ಕಾಗಿ ಹೋರಾಡಿ ಪ್ರಾಣ ತ್ಯಾಗ ಮಾಡಿದವರ ಇತಿಹಾಸವನ್ನು ಪರಿಚಯಿಸುವ ಜವಾಬ್ದಾರಿ ಶಿಕ್ಷಕರುಗಳ ಮೇಲಿದೆ ಎಂದು ತಿಳಿಸಿದರು. ಎಂ.ಬಿ.ಜಯದೇವಮೂರ್ತಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ತಾಲ್ಲೂಕು ಮಕ್ಕಳ ಸಾಹಿತ್ಯ ವೇದಿಕೆ ಅಧ್ಯಕ್ಷ ಸಿ.ಎಂ.ರಾಜಶೇಖರಯ್ಯ, ಮುಖ್ಯ ಶಿಕ್ಷಕ ಟಿ.ಎಸ್. ಗಿರೀಶ್, ಶಿಕ್ಷಕರುಗಳಾದ ಷಣ್ಮುಖಪ್ಪ, ಅಜ್ಜಪ್ಪ ಜಿ.ಎಸ್. ವೇದಿಕೆಯಲ್ಲಿದ್ದರು. ರೂಪ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಶಿಕ್ಷಕಿ ಜಯಮಾಲ ಸ್ವಾಗತಿಸಿದರು. ಶಿಕ್ಷಕ ನವೀನ್ ಪಿ. ನಿರೂಪಿಸಿ ವಂದಿಸಿದರು.

## ವ್ಯಕ್ತಿ ಕಾಣೆ

» ಚಿತ್ರದುರ್ಗ



ಚಿತ್ರದುರ್ಗ ತಾಲ್ಲೂಕಿನ ಗುಡ್ಡದರಂಗವ್ವನಹಳ್ಳಿ ಗ್ರಾಮದ ನಿವಾಸಿ ಡಿ.ಹೆಚ್. ಮಂಜುನಾಥ ರೆಡ್ಡಿ (53) ಅವರು ಕಾಣೆಯಾಗಿರುವ ಪ್ರಕರಣ 2023ರ ಮಾರ್ಚ್ 4 ರಂದು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ಡಿ.ಹೆಚ್. ಮಂಜುನಾಥ ರೆಡ್ಡಿ ತಂದೆ ಡಿ. ಹೊನ್ನೂರಪ್ಪ ರೆಡ್ಡಿ, 5.2 ಅಡಿ ಎತ್ತರ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ತಲೆಯಲ್ಲಿ 2 ಇಂಚು ಉದ್ದದ ಕಪ್ಪು ಬಿಳಿ ಕೂದಲು ಇದ್ದು, ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಬಿಳಿ ಬಣ್ಣದ ತುಂಬ ತೋಳಿನ ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಈ ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

## ಆಕ್ಷೇಪಣೆ ಆಹ್ವಾನ

» ತುಮಕೂರು

ಮಧುಗಿರಿ ತಾಲ್ಲೂಕಿನ 2 ಅಂಗನವಾಡಿ ಕಾರ್ಯಕರ್ತೆ ಹಾಗೂ 19 ಸಹಾಯಕಿಯರ ಹುದ್ದೆಗಳನ್ನು ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯಲ್ಲಿ ತಾತ್ಕಾಲಿಕವಾಗಿ ಆಯ್ಕೆ ಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸದರಿ ಪಟ್ಟಿ ಕುರಿತು ಸಾರ್ವಜನಿಕರಿಂದ ಆಕ್ಷೇಪಣೆ ಆಹ್ವಾನಿಸಲಾಗಿದೆ. ಸಾರ್ವಜನಿಕರು ಆಕ್ಷೇಪಣೆಗಳಿದ್ದಲ್ಲಿ ಜುಲೈ 17ರ ಸಂಜೆ 5.30ರೊಳಗಾಗಿ ಅಗತ್ಯ/ಸಮಂಜಸ ದಾಖಲೆಗಳೊಂದಿಗೆ ಲಿಖಿತವಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಧುಗಿರಿ ಈ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 15ರಂದು ಉದ್ಯೋಗಕ್ಕಾಗಿ ನೇರ ಸಂದರ್ಶನ

» ತುಮಕೂರು

ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಮತ್ತು Aavas Financiers Limited (Kunigal Branch) ಸಂಸ್ಥೆಯ ಸಹಭಾಗಿತ್ವದಲ್ಲಿ ಉದ್ಯೋಗ ನೀಡುವ ಸಂಬಂಧ ಜುಲೈ 15 ರಂದು ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನ ನಡೆಯಲಿದೆ. ಪಿಯುಸಿ ಹಾಗೂ ಯಾವುದೇ ಪದವಿ ಪಾಸಾದ ಪುರುಷ ಅಭ್ಯರ್ಥಿಗಳು ಜುಲೈ 15 ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಡಿ.ಸಿ.ಸಿ. ಬ್ಯಾಂಕ್ ಎದುರು, ಚರ್ಚ್ ಸರ್ಕಲ್ ಹತ್ತಿರ, ತುಮಕೂರು ಇಲ್ಲಿ ತಮ್ಮ ಬಯೋಡೇಟಾದೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0816-2278488ನ್ನು ಸಂಪರ್ಕಿಸಬಹುದಾಗಿದೆ ಎಂದು ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೇಂದ್ರ ಸರ್ಕಾರ ರಾಹುಲ್‌ಗೆ ಕಿರುಕುಳ ನೀಡುತ್ತಿರುವುದನ್ನು ವಿರೋಧಿಸಿ ಜಿಲ್ಲಾ ಕಾಂಗ್ರೆಸ್‌ನಿಂದ ಮೌನ ಪ್ರತಿಭಟನೆ

» ಚಿತ್ರದುರ್ಗ

ಎ.ಐ.ಸಿ.ಸಿ. ಯುವ ನೇತಾರ ರಾಹುಲ್‌ಗಾಂಧಿಗೆ ಕೇಂದ್ರ ಸರ್ಕಾರ ಕಿರುಕುಳ ನೀಡುತ್ತಿರುವುದನ್ನು ವಿರೋಧಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಸಮೀಪ ಬುಧವಾರ ಮೌನ ಪ್ರತಿಭಟನೆ ನಡೆಸಲಾಯಿತು.




ಪ್ರಧಾನಿ ನರೇಂದ್ರಮೋದಿ ಮತ್ತು ಅದಾನಿ ನಡುವಿನ ಸಂಬಂಧವನ್ನು ರಾಹುಲ್‌ಗಾಂಧಿ ವಿವಿಧ ವೇದಿಕೆಗಳಲ್ಲಿ ನಿರಂತರವಾಗಿ ಪ್ರಶ್ನಿಸುತ್ತ ಸಾರ್ವಜನಿಕವಾಗಿ ಮೋದಿರವರ ದುರಾಡಳಿತ. ಅದಾನಿಯ ಲೂಟಿಕೋರತನವನ್ನು ಬಹಿರಂಗಪಡಿಸುತ್ತಿರುವುದರಿಂದ ಕೇಂದ್ರ ಸರ್ಕಾರ ರಾಹುಲ್‌ಗಾಂಧಿರವರನ್ನು ಸಂಸತ್ ಸ್ಥಾನದಿಂದ ಅನರ್ಹಗೊಳಿಸಿ ವಿನಾ ಕಾರಣ ಮಾನಸಿಕವಾಗಿ ಹಿಂಸೆ ನೀಡುತ್ತಿರುವುದು ಪ್ರಜಾಪ್ರಭುತ್ವ ವಿರೋಧಿಯಾಗಿದೆ ಎಂದು ಕಾಂಗ್ರೆಸ್‌ನವರು ಮೌನವಾಗಿ ಪ್ರಧಾನಿ ಮೋದಿರವರ ಹಿಟ್ಲರ್‌ತನವನ್ನು ತೀವ್ರವಾಗಿ ಖಂಡಿಸಿದರು.

ಸತ್ಯ ಮತ್ತು ನ್ಯಾಯಕ್ಕಾಗಿ ರಾಹುಲ್‌ಗಾಂಧಿರವರು ಕೇಂದ್ರ ಸರ್ಕಾರದ ವಿರುದ್ದ ನಡೆಸುತ್ತಿರುವ ಹೋರಾಟಕ್ಕೆ ನಾವುಗಳು ಸದಾ ಜೊತೆಯಲ್ಲಿದ್ದೇವೆಂದು ಕಾಂಗ್ರೆಸ್ ಮುಖಂಡರುಗಳು ಹಾಗೂ ಕಾರ್ಯಕರ್ತರು ಧರಣಿಯಲ್ಲಿ ಭಾಗವಹಿಸಿ ಬೆಂಬಲಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಕಾರ್ಯಾಧ್ಯಕ್ಷ ಕೆ.ಎಂ. ಹಾಲಸ್ವಾಮಿ, ಪ್ರಧಾನಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್. ಮೈಲಾರಪ್ಪ, ಹಿರಿಯ ಉಪಾಧ್ಯಕ್ಷರುಗಳಾದ ಜಿ.ಎಸ್.ಕುಮಾರ್‌ಗೌಡ, ಡಿ.ಟಿ.ವೆಂಕಟೇಶ್, ಶಬ್ಬೀರ್ ಅಹಮದ್, ಯುವ ಮುಖಂಡ ಜೆ.ಜೆ.ಹಟ್ಟಿ ಡಾ.ಬಿ.ತಿಪ್ಪೇಸ್ವಾಮಿ, ಮಾಜಿ ಶಾಸಕ ಎ.ಉಮಾಪತಿ, ವಿಧಾನಪರಿಷತ್ ಸದಸ್ಯೆ ಜಯಮ್ಮ ಬಾಲರಾಜ್, ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್. ಕೆ.ಸರ್ದಾರ್, ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಆರ್.ಕೃಷ್ಣಮೂರ್ತಿ, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್, ಎಸ್ಟಿ.ವಿಭಾಗದ ಅಧ್ಯಕ್ಷ ಹೆಚ್.ಅಂಜಿನಪ್ಪ, ಎಸ್ಸಿ. ವಿಭಾಗದ ಅಧ್ಯಕ್ಷ ಜಯಣ್ಣ, ಪದವೀಧರ ವಿಭಾಗದ ಅಧ್ಯಕ್ಷ ಮುದಸಿರ್ ನವಾಜ್, ವೃತ್ತಿಪರ ವಿಭಾಗದ ಜಿಲ್ಲಾಧ್ಯಕ್ಷ ಮಹಡಿ ಶಿವಮೂರ್ತಿ, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಪ್ರಕಾಶ್, ಅಸಂಘಟಿತ ಕಾರ್ಮಿಕ ವಿಭಾಗದ ಜಿಲ್ಲಾಧ್ಯಕ್ಷ ಮೋಹನ್ ಪೂಜಾರಿ, ಉಪಾಧ್ಯಕ್ಷ ಎಲ್.ಬಿ.ರಾಜಪ್ಪ, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಯು.ಲಕ್ಷ್ಮಿಕಾಂತ್, ಅಲ್ಪಸಂಖ್ಯಾತ ವಿಭಾಗದ ಜಿಲ್ಲಾಧ್ಯಕ್ಷ ಅಬ್ದುಲ್ಲಾ, ಜಿಲ್ಲಾ ಕಾಂಗ್ರೆಸ್ ಮಹಿಳಾಧ್ಯಕ್ಷೆ ಗೀತ ನಂದಿನಿಗೌಡ, ನಗರಸಭೆ ಮಾಜಿ ಅಧ್ಯಕ್ಷ ಹೆಚ್.ಮಂಜಪ್ಪ, ಸೈಯದ್ ಖುದ್ದೂಸ್ ಸೇರಿದಂತೆ ವಿವಿಧ ಮುಂಚೂಣಿ ಘಟಕಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಜಿಲ್ಲಾ ಕಾಂಗ್ರೆಸ್ ಸಮಿತಿ ಪದಾಧಿಕಾರಿಗಳು ಧರಣಿಯಲ್ಲಿ ಭಾಗವಹಿಸಿದ್ದರು.

# ರಾಹುಲ್‌ಗೆ ನೈತಿಕ ಬಲತುಂಬಲು ಪಕ್ಷದ ವತಿಯಿಂದ ಧರಣಿ ಸತ್ಯಾಗ್ರಹ: ಟಿ.ತಿಪ್ಪೇಸ್ವಾಮಿ

» ಚಳ್ಳಕೆರೆ

ಕಾಂಗ್ರೆಸ್ ಪಕ್ಷದ ಎಐಸಿಸಿ ಉಪಾಧ್ಯಕ್ಷ ರಾಹುಲ್‌ಗಾಂಧಿಯವರಿಗೆ ನೀಡಿದ ಶಿಕ್ಷೆಯನ್ನು ರದ್ದು ಪಡಿಸಲು ಹೈಕೋರ್ಟ್ ನಿರಾಕರಿಸಿದ್ದರೂ ಸಹ ರಾಹುಲ್‌ಗಾಂಧಿಯವರ ನಾಯಕತ್ವವನ್ನು ಕಾಂಗ್ರೆಸ್ ಪಕ್ಷ ಬೆಂಬಲಿಸುತ್ತದೆಯಲ್ಲದೆ, ಅವರಿಗೆ ಆತ್ಮಸ್ಥೈರ್ಯ ತುಂಬಲು ಧರಣಿ ಸತ್ಯಾಗ್ರಹ ಮೂಲಕ ನಾವೆಲ್ಲರೂ ರಾಹುಲ್‌ಗಾಂಧಿಗೆ ಬೆಂಬಲ ವ್ಯಕ್ತಪಡಿಸುತ್ತೇವೆಂದು ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ, ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಟಿ.ತಿಪ್ಪೇಸ್ವಾಮಿ ತಿಳಿಸಿದರು.



ಅವರು, ಬುಧವಾರ ತಾಲ್ಲೂಕು ಕಚೇರಿ ಆವರಣದಲ್ಲಿ ನಡೆದ ಧರಣಿಗೂ ಮುನ್ನ ಅಂಬೇಡ್ಕರ್ ವೃತ್ತದ ಬಳಿ ಅಂಬೇಡ್ಕರ್‌ಗೆ ಮಾಲಾರ್ಪಣೆ ಮಾಡಿ ಧರಣಿ ಸತ್ಯಾಗ್ರಹದಲ್ಲಿ ಪಾಲ್ಗೊಂಡು ಮಾತನಾಡಿದರು. ಕೆಪಿಸಿಸಿ ಸೂಚನೆ ಮೇರೆಗೆ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ರಾಹುಲ್‌ಗಾಂಧಿಯವರ ಬೆನ್ನಿಗೆ ನಿಂದಿದ್ದೇವೆ. ಘೋಷಣೆಯನ್ನು ಕೂಗದೆ ಮೌನದಿಂದ ಧರಣಿ ನಡೆಸಲಾಗಿದೆ. ಈ ಕಾರ್ಯಕ್ರಮಕ್ಕೆ ನಿರೀಕ್ಷೆಗೂ ಮೀರಿ ಹೆಚ್ಚಿನ ಪದಾಧಿಕಾರಿಗಳು, ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದು ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿದ್ದು ಎಲ್ಲರಿಗೂ ಪಕ್ಷದ ಪರವಾಗಿ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಪ್ರಕಾಶ್‌ಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ನಗರಸಭಾ ಸದಸ್ಯರಾದ ಮಲ್ಲಿಕಾರ್ಜುನ, ಪ್ರಕಾಶ್, ರಮೇಶ್‌ಗೌಡ, ವಿರೂಪಾಕ್ಷಿ, ಕವಿತಾ, ಸಾವಿತ್ರಮ್ಮ, ಮಂಜುಳಾ, ಸುಮಕ್ಕ, ಸೈಪುಲ್ಲಾ, ಅನ್ವರ್ ಮಾಸ್ಟರ್, ಸೈಯದ್ ಮುಂತಾದವರು ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿದ್ದರು.

## ಯೋಗ ಗುರು ಎನ್.ಪರಶುರಾಮಪ್ಪಗೆ ಲೈಫ್ ಅಚೀವ್ಮೆಂಟ್ ಅವಾರ್ಡ್

» ದಾವಣಗೆರೆ

ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ದಾವಣಗೆರೆಯ ಅಂತಾರಾಷ್ಟ್ರೀಯ ಯೋಗ ಗುರು



ಎನ್.ಪರಶುರಾಮಪ್ಪ ಅವರಿಗೆ ಲೈಫ್ ಅಚೀವ್ಮೆಂಟ್ ಅವಾಡ್9 ಪ್ರದಾನ ಮಾಡಲಾಯಿತು.9ನೇ ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ಎಸ್ ಜಿಎಸ್ ಅಂತಾರಾಷ್ಟ್ರೀಯ ಯೋಗ ಫೆಡರೇಶನ್ ಕಾಲೇಜು ಮತ್ತು ಸಂಶೋಧನ ಕೇಂದ್ರ, ರಾಜ್ಯ ಯುವಜನಸೇವಾ ಕ್ರೀಡಾ ಇಲಾಖೆ, ಕೇಂದ್ರ ಸರ್ಕಾರದ ನೆಹರು ಯುವ ಕೇಂದ್ರ, ಕರ್ನಾಟಕ ಯೋಗಾಸನ ಸ್ಪೋಟ್ಸ್9 ಅಸೋಸಿಯೇಷನ್ ಸಹಯೋಗದಲ್ಲಿ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಯೋಗ ಚಾಂಪಿಯನ್ ಶಿಪ್ ಕಾರ್ಯಕ್ರಮದಲ್ಲಿ ಅಂತಾರಾಷ್ಟ್ರೀಯ ಯೋಗ ಗುರು ಎನ್.ಪರಶುರಾಮಪ್ಪ ಅವರು ಯೋಗ ಕ್ಷೇತ್ರದಲ್ಲಿ ಮಾಡಿರುವ ಸಾಧನೆ ಮತ್ತು ಸಮಾಜಸೇವೆ ಗುರುತಿಸಿ ಈ ಅವಾಡ್9 ಪ್ರದಾನ ಮಾಡಲಾಯಿತು.ಈ ಸಂದರ್ಭದಲ್ಲಿ ಯುವಜನಸೇವಾ ಕ್ರೀಡಾ ಸಚಿವ ಎನ್.ನಾಗೇಂದ್ರ, ಕೆಎಸ್ ಎಂಎಸ್ ಸಿ ವ್ಯವಸ್ಥಾಪಕ ನಿರ್ದೇಶಕರು, ಎಸ್ ಜಿಎಸ್ ಅಂತಾರಾಷ್ಟ್ರೀಯ ಯೋಗಾಸನ ಸ್ಪೋಟ್ಸ್9 ಫೆಡರೇಶನ್ ನಿರ್ದೇಶಕ ಎಸ್.ರಂಗಪ್ಪ, ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿಮಯ ಅಧ್ಯಕ್ಷ ಹಾಗೂ ಕರ್ನಾಟಕ ಯೋಗಾಸನ ಸ್ಪೋಟ್ಸ್9 ಅಸೋಸಿಯನ್ ಉಪ ಅಧ್ಯಕ್ಷ ಎಂ.ಲಕ್ಷ್ಮೀನಾರಾಯಣ, ಕೆ.ಎಸ್.ಶಕುಂತಲಾ ದೇವಿ, ಸುರೇಶ್ ಕುಮಾರ್, ಡಾ.ಎಂ.ನಿರಂಜನಮೂರ್ತಿ, ಎಜಿಕೆ ಜಯಪ್ರಕಾಶ್ ಸೇರಿದಂತೆ ಇನ್ನಿತರರು ಇದ್ದರು. ಲೈಫ್ ಅಚೀವ್ಮೆಂಟ್ ಅವಾಡ್9 ಗೆ ಭಾಜನರಾಗಿರುವ ಎನ್.ಪರಶುರಾಮಪ್ಪ ಅವರಿಗೆ ದಾವಣಗೆರೆ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ವಾಸುದೇವ್ ರಾಯ್ಕರ್, ಆಯುಷ್ಯ ಇಲಾಖೆ ಉಪನಿರ್ದೇಶಕ ಡಾ. ಶಂಕರಗೌಡ, ಡಿವೈಎಸ್ಪಿ ರುದ್ರೇಶ್ , ದಾವಣಗೆರೆ ಎಸ್‌ಎಸ್‌ಎಸ್ ಯೋಗ ಫೆಡರೇಷನ್ ಅಧ್ಯಕ್ಷ ರುದ್ರಪ್ಪ, ಉಪಾಧ್ಯಕ್ಷ ಗೋಪಾಲ್ ರಾವ್, ಖಜಾಂಚಿ ಎಸ್. ರಾಜಶೇಖರ್, ನಿರ್ದೇಶಕರಾದ ಜೆ.ಎಸ್.ವೀರೇಸ್, ಎ.ಎನ್.ನಿಂಗಪ್ಪ, ಎಂ.ವೈ.ಸತೀಶ್, ಅಜ್ಜಯ, ರಾಘವೇಂದ್ರ ಚೌಹಣ್, ರಂಗಪ್ಪ , ನಾಗರಾಜ್ ಹಾಗೂ ಸಾವಿತ್ರಮ್ಮ, ಯೋಗ ವಿದ್ಯಾರ್ಥಿಗಳು, ವಿವಿಧ ಸಂಘಟನೆಗಳ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ.

# ಪ್ರಕಾಶ್ ಸ್ಪಾಂಜ್ ಕಂಪನಿಯ ಆರೋಗ್ಯ ಜಾಗೃತಿ ಸೇವಾ ಕಾರ್ಯ ಪ್ರಶಂಸನೀಯ: ಶೃತಿಚಂದ್ರಕಾಂತ್

» ಚಳ್ಳಕೆರೆ

ಗ್ರಾಮೀಣ ಭಾಗದ ಜನರು ಸದಾ ತಮ್ಮದೇಯಾದ ಕೆಲಸ ಕಾರ್ಯಗಳಲ್ಲಿ ನಿರತರಾಗಿ ಆರೋಗ್ಯದ ಕಡೆ ಗಮನ ನೀಡದೆ ನಿರ್ಲಕ್ಷ್ಯ ವಹಿಸುತ್ತಾರೆ. ಆದರೆ, ಪ್ರಕಾಶ್ ಸ್ಪಾಂಜ್ ಐರನ್ ಅಂಡ್ ಪವರ್ ಪ್ರೈ.ಲಿ ನವರ ಆರೋಗ್ಯ ಜಾಗೃತಿ ಕಾರ್ಯಕ್ರಮ ಗ್ರಾಮೀಣ ಜನರಿಗೆ ವರದಾನವಾಗಿದೆ ಎಂದು ಸಾಣಿಕೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶೃತಿಚಂದ್ರಕಾಂತ್ ತಿಳಿಸಿದರು.




ಅವರು, ಸಾಣಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಡೇಕುಂಟೆ, ಕಾಪರಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಕಂಪನಿ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಗಿಡ ನೆಡುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಪ್ರತಿಯೊಬ್ಬರ ಆರೋಗ್ಯ ಸುಧಾರಣೆಯಲ್ಲಿ ಪ್ರಕೃತಿಯ ಪಾತ್ರವೂ ಮಹತ್ವವುಳ್ಳದ್ದಾಗಿದ್ದು, ಈ ಹಿನ್ನೆಲೆಯಲ್ಲಿ ಗಿಡನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ. ಗ್ರಾಮೀಣ ಜನರು ಇಂತಹ ಶಿಬಿರಗಳಲ್ಲಿ ಭಾಗವಹಿಸಿ ತಮ್ಮಲ್ಲಿರುವ ರೋಗಗಳ ತಪಾಸಣೆ ನಡೆಸಿ ಸೂಕ್ತ ಚಿಕಿತ್ಸೆ ಪಡೆದು ಆರೋಗ್ಯವಂತರಾಗಿ ಬದುಕು ನಡೆಸುವಲ್ಲಿ ಶಕ್ತರಾಗಬೇಕು ಎಂದರು.

ಪ್ರಮುಖ ಸುದ್ದಿ

# ವಿವಿ ಜಾಗತಿಕ ಆಕರ್ಷಣೆಯಾಗಬೇಕು: ಪ್ರೊ.ಕುಂಬಾರ

» ದಾವಣಗೆರೆ

ವಿಶ್ವವಿದ್ಯಾನಿಲಯಗಳು ಜಾಗತಿಕ ಸ್ಪರ್ಧೆಗೆ ತಲುಪಬೇಕು. ಸಹಭಾಗಿತ್ವ ಹೊಂದುವ ನಿಟ್ಟನಲ್ಲಿ ವಿದೇಶಗಳಿಂದ ಬೋಧಕರು ಹಾಗೂ ವಿದ್ಯಾರ್ಥಿಗಳನ್ನು ಆರ್ಕಷಿಸುವಂತಗಾಬೇಕು ಎಂದು ದಾವಣಗೆರೆ ವಿಶ್ವ ವಿದ್ಯಾನಿಲಯದ ಕುಲಪತಿಗಳಾದ ಪ್ರೋ. ಬಿ.ಡಿ ಕುಂಬಾರ ತಿಳಿಸಿದರು.




ವಿಶ್ವವಿದ್ಯಾನಿಲಯದಲ್ಲಿ ಬುಧವಾರ ಆಡಳಿತ ಮತ್ತು ನಿರ್ವಹಣಾ ಶಾಸ್ತ್ರ ವಿಭಾಗದ ವತಿಯಿಂದ ಆತ್ಮನಿರ್ಭರ ಭಾರತ ಹಾಗೂ ನಿರ್ವಹಣಾ ಶಾಸ್ತ್ರದ ಹೊಸ ದಿಕ್ಕುಗಳ ಕುರಿತು ಆಯೋಜಿಸಲಾಗಿದ್ದ ರಾಷ್ಟ್ರಮಟ್ಟದ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಜಾಗತಿಕ ಈ ಕಾಲದಲ್ಲಿ ವಿಶ್ವವಿದ್ಯಾನಿಲಯಗಳ ಉನ್ನತ ಶ್ರೇಯಾಂಕ ಪಡೆದುಕೊಳ್ಳುವುದು ಅತ್ಯಗತ್ಯವಾಗಿದ್ದು, ಇದಕ್ಕಾಗಿ ಕೇವಲ ಪಾಠ ಬೋಧನೆಗಷ್ಟೇ ಅಲ್ಲದೇ, ಸಂಶೋಧನಾ ಪ್ರಬಂಧಗಳ ಬಗ್ಗೆ ಪರಿಣಿತಿ ಹೊಂದಿರುವ ಉಪನ್ಯಾಸಕರ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ಕೆಲ ವಿಶ್ವವಿದ್ಯಾನಿಲಯಗಳು ಕೇವಲ ಅಧ್ಯಯನ ಹಾಗೂ ಸಂಶೋಧನೆಗಾಗಿಯೇ ಉಪನ್ಯಾಸಕರನ್ನು ನೇಮಿಸಿಕೊಳ್ಳುತ್ತಿವೆ ಎಂದರು. ವಿಶ್ರಾಂತ ಕುಲಪತಿಗಳಾದ ಪ್ರೋ. ಎಂ.ಎಸ್ ಸುಭಾಸ್ ಮಾತನಾಡಿ ಜಾಗತಿಕ ಪೂರೈಕೆ ಸರಪಳಿ ಮಾರುಕಟ್ಟೆಗಳಲ್ಲಿ ಭಾರತೀಯ ಸರಕುಗಳನ್ನು ಉತ್ತೇಜಿಸಲು ಮತ್ತು ದೇಶವು ಸ್ವಾವಲಂಬನೆಯನ್ನು ಸಾಧಿಸಲು ಆತ್ಮನಿರ್ಭರ್ ಪ್ರಾರಂಭವಾಗಿದೆ. ಸಂಶೋಧನಾ ಪ್ರಬಂಧಗಳಿಗೆ ಒತ್ತು ನೀಡಿದಾಗ ಮಾತ್ರ ಉತ್ತಮ ಶ್ರೇಯಾಂಕ ಪಡೆದುಕೊಳ್ಳುವ ಜೊತೆಗೆ, ವಿದ್ಯಾರ್ಥಿಗಳ ಭವಿಷ್ಯಕ್ಕೂ ನೆರವಾಗಲು ಸಾಧ್ಯ ಎಂದು ತಿಳಿಸಿದರು. ದೇಶದ ಮೊದಲ ಹತ್ತು ಉನ್ನತ ವಿಶ್ವವಿದ್ಯಾನಿಲಯಗಳಿಗೆ ರೂ.10ಸಾವಿರ ಕೋಟಿ ಗಳನ್ನು ನೀಡುವುದಾಗಿ ಕೇಂದ್ರ ಸರ್ಕಾರ ಪ್ರಕಟಿಸಿದೆ. ಈ ಅನುದಾನ ಪಡೆಯಲು ದಾವಣಗೆರೆ ವಿಶ್ವವಿದ್ಯಾನಿಲಯವೂ ಗುರಿ ಹೊಂದಬೇಕು ಎಂದರು.ಕರ್ನಾಟಕ ವಿಶ್ವವಿದ್ಯಾನಿಲಯಕ್ಕೆ ಸರ್ಕಾರದಿಂದ ಬರುವ ಅನುದಾನದ ಶೇ.90ರಷ್ಟು ಹಣ ವೇತನಕ್ಕೇ ಹೋಗುತ್ತಿದೆ. ಅಭಿವೃದ್ಧಿಗೆ ಹೆಚ್ಚು ಹಣ ಸಿಗುತ್ತಿಲ್ಲ. ಸರ್ಕಾರಗಳೂ ಸಹ ವಿಶ್ವವಿದ್ಯಾನಿಲಯಗಳಿಗೆ ಹೆಚ್ಚು ಅನುದಾನ ನೀಡಲಿ ಸಾಧ್ಯವಾಗುತ್ತಿಲ್ಲ.ಲೆಕ್ಕ ಪರಿಶೋಧಕ ಮತ್ತು ಉದ್ಯಮಿಯಾದ ಅಥಣಿ ವೀರಣ್ಣ ಮಾತನಾಡಿ ಈ ಹಿಂದೆ ಕೈಗಾರಿಕೆಗಳನ್ನು ನಿಯಂತ್ರಿಸುವ ಕಾನೂನುಗಳಿದ್ದವು. ಇದರಿಂದಾಗಿ ಕೆಲವೇ ಕಂಪನಿಗಳಿಗೆ ಉತ್ಪಾದನಾ ಅವಕಾಶ ಸಿಗುತ್ತಿತ್ತು. ಈಗ ಉದಾರೀಕರಣ, ಖಾಸಗೀಕರಣ ಹಾಗೂ ಜಾಗತೀಕರಣದಿಂದ ಉದ್ಯಮಗಳಿಗೆ ಹೆಚ್ಚು ಅವಕಾಶ ಸಿಗುತ್ತಿದೆ ಎಂದರು. ಬೆಂಗಳೂರಿನ ಐ.ಎಸ್.ಇ.ಸಿ ಪ್ರೊ. ರಾಮಪ್ಪ ಕೆ.ಬಿ, ಆಡಳಿತ ಕುಲಸಚಿವರಾದ ಬಿ.ಬಿ ಸರೋಜ, ಪರೀಕ್ಷಾಂಗ ಕುಲಸಚಿವರಾದ ಡಾ.ಶಿವಶಂಕರ್ ಕೆ, ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ ಪ್ರಿಯಾಂಕ ಡಿ, ಡಾ.ಶಶಿಧರ್ ಹಾಗೂ ಎಂ.ಬಿ.ಎ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T